ಸಂಪುಟ : 9 ಸಂಚಿಕೆ 208 ಪುಟ : 4 ಬೆಲೆ: 3.00 ಗುರುವಾರ ಸೆಪ್ಟೆಂಬರ್ 26 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 208 Pages : 4 Price : 3.00 Thursday september 26 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಸೆಪ್ಟೆಂಬರ್ 26 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 15, 17 ಮೀನಿನ ಮಾರ್ಕೆಟ್, ಡಿಸಿ ಮಿಲ್ ರೋಡ್, ಬಸವೇಶ್ವರ ಗುಡಿ ಲೈನ್, ಗಣಪತಿಗುಡಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 17, 18, 19, 20 ಬಾವಿ ಮೆಂಬರ್ ಲೈನ್, ಹಾವನೂರ ಲೈನ್, ಚೌಹಾಣ ಲೈನ್, ಬಳಿಗೇರ ಲೈನ್, ಮೀನಿನ ಮಾರ್ಕೆಟ್ ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 24 ಅಬ್ಬಿಗೇರಿ ಕಾಂಪೌಂಡ್, ತೆಗ್ಗಿನ ಲಾಟ್, ಕಮ್ಮಾರಸಾಲ, ಸಾಲಮನೆ, ಮಕಾನಗಲ್ಲಿ ಕೆಲವು ಉಳಿದ ಭಾಗಗಳು. ವಾರ್ಡ್ ನಂ. 11, 12 ನಿಸರ್ಗ ಬಡಾವಣೆ 4ನೇ ಕ್ರಾಸ್, ರಿಂಗ್ ರೋಡ್, ಗಾರ್ಡನ್ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 29 ಚಂದಾವರಿಯವರ ಲೈನ್, ಭಾಂಡಗೆ ಲೈನ್, ಹೊಸ ಹುಡ್ಕೋ, ನೆಲ್ಸನ್ ಮಂಡೇಲಾ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 28 ಪಂಚಾಕ್ಷರಿ ನಗರ 5 ನೇ ಕ್ರಾಸ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 2 ಸೆಟ್ಲಮೆಂಟ್, ಹರಣ ಶಿಕಾರಿ ಓಣಿ, ಹನುಮಂತ ದೇವರ ಗುಡಿ ಲೈನ್, ಗಾಂಧಿನಗರ, ಕುಷ್ಟಗಿ ಚಾಳ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ಜಿಲ್ಲಾ ಮಟ್ಟದ ದಸರಾ ಸೈಕ್ಲಿಂಗ್ ಆಯ್ಕೆ ಪ್ರಕ್ರಿಯೆ

■ ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ಗದಗ ಜಿಲ್ಲಾ ಮಟ್ಟದ ದಸರಾ ಸೈಕ್ಲಿಂಗ್ ಆಯ್ಕೆ ಪ್ರಕ್ರಿಯೆಯನ್ನು ನೇರವಾಗಿ ಜಿಲ್ಲಾ ಮಟ್ಟದಿಂದ ರಾಜ್ಯ ಮಟ್ಟಕ್ಕೆ ಆಯ್ಕೆ ಮಾಡುವುದರಿಂದ ಕೇಂದ್ರ ಕಚೇರಿಯ ಆದೇಶದಂತೆ ಪ್ರತಿ ಜಿಲ್ಲೆಯ ಪುರುಷ ಮತ್ತು ಮಹಿಳಾ ಕ್ರೀಡಾಪಟುಗಳನ್ನು ಗದಗ ಜಿಲ್ಲೆಯಿಂದ ಜಿಲ್ಲಾ ತಂಡವನ್ನು ಆಯ್ಕೆ ಮಾಡಿ ಕಳುಹಿಸಬೇಕಾಗಿದೆ.

ಸೆಪ್ಟೆಂಬರ್ 27 ರಂದು ಬೆಳಿಗ್ಗೆ 6.30 ಗಂಟೆಗೆ ಸೈಕ್ಲಿಂಗ್ ಆಯ್ಕೆ ಪ್ರಕ್ರಿಯೆಯನ್ನು ಸರ್ವಜ್ಞ ಸರ್ಕಲ್, ಫ್ಲಾಯ್ ಓವರ್ ಹತ್ತಿರ, ಹೊಂಬಳ ರಸ್ತೆ, ಗದಗದಲ್ಲಿ ಮಾಡಲಾಗುವುದು. ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಸೈಕ್ಲಿಂಗ್ ಕ್ರೀಡಾ ಪಟುಗಳು ಗದಗ ಜಿಲ್ಲೆಯವರಾಗಿರಬೇಕು. ಕಡ್ಡಾಯವಾಗಿ ತಮ್ಮ ಆಧಾರ್ ಕಾರ್ಡ್‌ನ್ನು ತರತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಶ್ರೀಮತಿ ವಿದ್ಯಾ ಕುಲಕರ್ಣಿ -89519-36636 ಹಾಗೂ ನಿಂಗರೆಡ್ಡಿ ತೇರಿನಗಡ್ಡಿ - 7975891388 ಗೆ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗದಗ ಜಿಲ್ಲಾ ಮಟ್ಟದ ಕೆಡಿಪಿಗೆ ಅಧಿಕಾರೇತರ ಸದಸ್ಯರ ನೇಮಕ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಮಟ್ಟದ ತ್ರೈಮಾಸಿಕ ಪರಿಶೀಲನಾ ಸಮಿತಿಗೆ (ಕೆ.ಡಿ.ಪಿ) ಅಧಿಕಾರೇತರ ಸದಸ್ಯರ ನೇಮಕಗೊಳಿಸಿ ಸರ್ಕಾರ ಆದೇಶ ಹೊರಡಿಸಿದೆ. ಡಿ.ಆರ್. ಪಾಟೀಲ, ಎಸ್. ಎನ್. ಬಳ್ಳಾರಿ, ಪ್ರಭು ವಿ. ಮೇಟಿ, ಎಸ್.ಡಿ. ಮಕಾನದಾರ ಹಾಗೂ ಶಾರದಾ ಹಿರೇಗೌಡ್ರ ಅವರನ್ನು ಗದಗ ಜಿಲ್ಲಾ ಮಟ್ಟದ ತ್ರೈಮಾಸಿಕ ಕೆ.ಡಿ.ಪಿ ಸಮಿತಿಗೆ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅಧಿಕಾರೇತರ ಸದಸ್ಯರರನ್ನಾಗಿ ನಾಮ ನಿರ್ದೇಶನ ಗೊಳಿಸಿ ಆದೇಶಿಸಿದೆ. ಈ ಆದೇಶವನ್ನು ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಸರ್ಕಾರದ ಅದೀನ ಕಾರ್ಯದರ್ಶಿ ಮಲ್ಲಿನಾಥ ಅವರು ಆದೇಶ ಹೊರಡಿಸಿದ್ದಾರೆ.

### ಗ್ರಾಮ ಆಡಳಿತ ಅಧಿಕಾರಿ ಹುದ್ದೆಗೆ ನಡೆಯುವ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆ ಸಭೆಯಲ್ಲಿ ಡಿಸಿ ಗೋವಿಂದರೆಡ್ಡಿ

# ಪಾರದರ್ಶಕ, ವ್ಯವಸ್ಥಿತ ಪರೀಕ್ಷೆಗಾಗಿ ಕ್ರಮವಹಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಸೆಪ್ಟೆಂಬರ್ 29ರಂದು ಕಂದಾಯ ಇಲಾಖೆಯ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆ ಜರುಗಲಿದ್ದು, ಪರೀಕ್ಷೆಯನ್ನು ಪಾರದರ್ಶಕವಾಗಿ ಯಾವುದೇ ಅವ್ಯವಹಾರಗಳಿಗೆ ಆಸ್ಪದ ನೀಡದೇ ಸುವ್ಯವಸ್ಥಿತವಾಗಿ ಜರುಗಿಸಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಸೂಚಿಸಿದರು.

ಜಿಲ್ಲಾಡಳಿತ ಭವನದ ಕೆಸ್ವಾನ್ ಹಾಲ್‌ನಲ್ಲಿ ಬುಧವಾರ ಕಂದಾಯ ಇಲಾಖೆಯ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ್ಯಾದಂತ 38 ಪರೀಕ್ಷಾ ಕೇಂದ್ರಗಳಲ್ಲಿ ಸೆ.29ರಂದು ಪರೀಕ್ಷೆ ಜರುಗಲಿದೆ. ಕಡ್ಡಾಯ ಕನ್ನಡ ಭಾಷೆ ಪರೀಕ್ಷೆ ಬೆಳಿಗ್ಗೆ 10.30ರಿಂದ ಮ. 12.30ರವರೆಗೆ ಸುಗಮವಾಗಿ, ಯಾವುದೇ ಲೋಪದೋಷಗಳಿಲ್ಲದಂತೆ ನಡೆಸಬೇಕು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನೀಡಿರುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕೆಂದರು.

ತ್ರಿಸದಸ್ಯ ಸಮಿತಿ, ವೀಕ್ಷಕ ಹಾಗೂ ಮಾರ್ಗಾಧಿಕಾರಿಗಳ ನೇಮಕ: ಪರೀಕ್ಷೆಗಳು ಅಚ್ಚುಕಟ್ಟಾಗಿ ನಡೆಯಲು ತ್ರಿ-ಸದಸ್ಯ ಸಮಿತಿಯನ್ನು, ವೀಕ್ಷಕರನ್ನು, ಸ್ಥಳೀಯ ನಿರೀಕ್ಷಣಾಧಿಕಾರಿ ಹಾಗೂ ಮಾರ್ಗಾಧಿಕಾರಿಗಳನ್ನು ನೇಮಕ ಮಾಡಲಾಗಿದ್ದು, ಅಧಿಕಾರಿಗಳು ತಮಗೆ ನಿಗದಿಪಡಿಸಿದ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು. ಪ್ರಶ್ನೆ ಪತ್ರಿಕೆ ಹಾಗೂ ಉತ್ತರ ಪತ್ರಿಕೆಗಳನ್ನು ಕೊಂಡೊಯ್ಯುವ ಸಮಯದಲ್ಲಿ ಉಸ್ತುವಾರಿ ತಂಡಕ್ಕೆ ಅಗತ್ಯ ಬಂದೋಬಸ್ತ್ ವ್ಯವಸ್ಥೆ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ನಿರ್ದೇಶಿಸಿದರು.



ಪ್ರತಿಬಂಧಕಾಜ್ಞೆ ಜಾರಿ: ಪರೀಕ್ಷೆಗಳು ಸುಗಮವಾಗಿ ಜರುಗುವ ಮತ್ತು ಶಿಸ್ತು, ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀ ಪರಿಮಿತಿಯೊಳಗೆ ಅಂದು ಬೆಳಿಗ್ಗೆ 8ರಿಂದ ಸಾಯಂಕಾಲ 6 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝೆರಾಕ್ಸ್ ಅಂಗಡಿ, ಸೈಬರ್ ಸೆಂಟರ್, ಬುಕ್‌ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ ಮಾಡಲು ಆದೇಶಿಸಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಪರೀಕ್ಷೆಗಳು ನಡೆಯುವ ಸಮಯದಲ್ಲಿ ಧ್ವನಿವರ್ಧಕಗಳ ಬಳಕೆಯನ್ನು ನಿರ್ಬಂಧಿಸಿದೆ.

ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು, ಪರೀಕ್ಷಾ ಕೇಂದ್ರದಲ್ಲಿ ಫ್ರಿಸ್ಕಿಂಗ್ ನಡೆಸುವ ಸಿಬ್ಬಂದಿಯೊಂದಿಗೆ ಮತ್ತು ಪರೀಕ್ಷಾ ಕೊಠಡಿಯ ಸಂವೀಕ್ಷಕರೊಂದಿಗೆ ಸಹಕರಿಸಿ ತಪಾಸಣೆಗೊಳಗಾಗುವುದು ಕಡ್ಡಾಯವಾಗಿದೆ. ಯಾವುದೇ ರೀತಿಯ ಎಲೆಕ್ಟ್ರಾನಿಕ್ಸ್ ಉಪಕರಣಗಳು, ಯಾವುದೇ ರೀತಿಯ ಉಪಕರಣಗಳನ್ನು ಕೊಂಡೊಯ್ಯುವುದನ್ನು ನಿಷೇಧಿಸಲಾಗಿದೆ. ಹೀಯರಿಂಗ್ ಏಡ್ ಉಪಕರಣ ಧರಿಸಿರುವ ಅಭ್ಯರ್ಥಿಗಳು ವೈದ್ಯಕೀಯ ದಾಖಲೆಗಳೊಂದಿಗೆ ವಿಶೇಷ ತಪಾಸಣೆಗೆ ಒಳಪಡುವುದು ಕಡ್ಡಾಯವಾಗಿರುತ್ತದೆ.

ಡ್ರೆಸ್‌ಕೋಡ್: ಅಭ್ಯರ್ಥಿಗಳು ಪರೀಕ್ಷಾ ಪ್ರವೇಶಪತ್ರದಲ್ಲಿ ತಿಳಿದಿರುವಂತೆ ಪರೀಕ್ಷೆ ವೇಳೆಯಲ್ಲಿ ಶೂ, ಸಾಕ್ಸ್‌ಗಳನ್ನು ಧರಿಸುವಂತಿಲ್ಲ. ಸಾಧಾರಣ ಚಪ್ಪಲಿಯನ್ನು ಧರಿಸಿ ಪರೀಕ್ಷೆಗೆ ಹಾಜರಾಗಬೇಕು. ಪರೀಕ್ಷಾ ಕೊಠಡಿಯೊಳಗೆ ಯಾವುದೇ ಆಧುನಿಕ ಉಪಕರಣಗಳು, ಪೇಪರ್, ಬುಕ್ಸ್ ತೆಗೆದುಕೊಂಡು ಹೋಗಲು ಅವಕಾಶವಿಲ್ಲ. ತುಂಬು ತೋಳಿನ ಶರ್ಟ್ ಮತ್ತು ಯಾವುದೇ ಆಭರಣಗಳನ್ನು ಮೆಟಲ್ ಮತ್ತು ನಾನ್ ಮೆಟಲ್(ಮಂಗಳ ಸೂತ್ರ ಹಾಗೂ ಕಾಲುಂಗುರಗಳನ್ನು ಹೊರತುಪಡಿಸಿ) ಪುಲ್ಲೋವರ್ಸ, ಜಾಕೆಟ್ ಮತ್ತು ಸ್ವೆಟರ್ಸಗಳನ್ನು ಧರಿಸಿ ಹಾಜರಾಗುವುದನ್ನು ನಿಷೇಧಿಸಿದೆ. ಮೆಟಲ್ ವಾಟರ್ ಬಾಟಲ್ ಮತ್ತು ನಾನ್ ಟ್ರಾನ್ಸಪರಂಟ್ ವಾಟರ್ ಬಾಟಲ್‌ಗಳನ್ನು ನಿಷೇಧಿಸಿದೆ.

ಅಭ್ಯರ್ಥಿಗಳ ಪ್ರವೇಶ ಪತ್ರದಲ್ಲಿ ತಿಳಿಸಿರುವ ವಸ್ತ್ರ ಸಂಹಿತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಪಾಲಿಸಬೇಕು. ಪ್ರಾಧಿಕಾರವು ನಿಗದಿಪಡಿಸಿರುವ ಸೂಚನೆಗಳನ್ನು ಸಂಬಂಧಪಟ್ಟವರು ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಪಾಲಿಸತಕ್ಕದ್ದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಪರೀಕ್ಷಾ ಕೇಂದ್ರಗಳಿಗೆ, ಗೋಡೆ ಗಡಿಯಾರಗಳ ಅಳವಡಿಕೆ, ಪರೀಕ್ಷಾ ಸಮಿತಿಯ ಸದಸ್ಯರುಗಳ ನಿರ್ವಹಿಸಬೇಕಾದ ವಿವಿಧ ಕರ್ತವ್ಯಗಳ ಕುರಿತು ಚರ್ಚಿಸಲಾಯಿತು. ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಸಿದ್ಧಲಿಂಗ ಮಸನಾಯಕ ಮತ್ತು ಬಿ.ಜಿ. ಗಿರಿತಿಮ್ಮನಣ್ಣವರ, ಜಿಲ್ಲಾ ಸಂಖ್ಯಾಸಂಗ್ರಹಣಾಧಿಕಾರಿ ಎ.ಎ. ಕಂಬಾಳಿಮಠ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜಿ.ಎಲ್. ಬಾರಾಟಕ್ಕೆ, ಪರೀಕ್ಷಾ ಕಾರ್ಯಕ್ಕೆ ನಿಯೋಜಿತರಾಗಿರುವ ಅಧಿಕಾರಿಗಳು, ಮೇಲ್ವಿಚಾರಕರು, ಸಮನ್ವಯ ಅಧಿಕಾರಿಗಳು ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

> ಜಿ.ಪಂ ಸಿಇಒ ಭರತ್ ಎಸ್ ಮಾತನಾಡಿ, ಪರೀಕ್ಷೆಗಳು ಪಾರದರ್ಶಕವಾಗಿ ಜರುಗಬೇಕು ಎನ್ನುವ ಹಿತದೃಷ್ಟಿಯಿಂದಲೇ ಪರೀಕ್ಷಾರ್ಥಿಗಳನ್ನು ಕಟ್ಟುನಿಟ್ಟಾಗಿ ತಪಾಸಣೆಗೊಳಪಡಿಸಲಾಗುತ್ತದೆ. ಪರೀಕ್ಷಾ ಕೊಠಡಿಯಿಂದ ಯಾವುದೇ ಪ್ರಶ್ನೆ ಪತ್ರಿಕೆ/ಓಎಂಆರ್ ಉತ್ತರ ಹಾಳೆ/ಪ್ರಶ್ನೆ ಸಹಿತ ಉತ್ತರ ಪುಸ್ತಕ ಹೊರಹೋಗದಂತೆ ಜಾಗೃತೆ ವಹಿಸಿ ಶಿಸ್ತು ಕ್ರಮ ಕೈಗೊಳ್ಳಬೇಕು. ಕೊಠಡಿ ಸಂವೀಕ್ಷಕರು ಅಭ್ಯರ್ಥಿಗಳ ಚಲನವಲನಗಳನ್ನು ಆಗಿಂದಾಗ್ಗೆ ಸೂಕ್ಷ್ಮವಾಗಿ ಗಮನಿಸಿ, ಯಾವುದೇ ಅಭ್ಯರ್ಥಿ ಸಂಶಯಾತ್ಮಕವಾಗಿ ವರ್ತಿಸುತ್ತಿದ್ದಲ್ಲಿ ತಕ್ಷಣ ಪರೀಕ್ಷಾ ಕೇಂದ್ರದ ಮುಖ್ಯಸ್ಥರಿಗೆ ಗಮನಕ್ಕೆ ತಂದು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

### ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಜಿಲ್ಲಾ ಬಿಜೆಪಿ ವತಿಯಿಂದ ಪ್ರತಿಭಟನೆ

# ಸಿದ್ದರಾಮಯ್ಯರಿಂದ ರಾಜ್ಯಕ್ಕೆ ಅಪಚಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಗ್ಯಾರಂಟಿ ಯೋಜನೆಗಳ ಹೆಸರಲ್ಲಿ ಜನರಿಗೆ ಆಮಿಷ ತೋರಿಸಿ ಅಧಿಕಾರಕ್ಕೆ ಬಂದು ಮುಖ್ಯಮಂತ್ರಿಯಾದ ಸಿದ್ದರಾಮಯ್ಯ ಜನಹಿತಕಾರ್ಯ ಮರೆತು ಸ್ವಜನ ಪಕ್ಷಪಾತ, ಭ್ರಷ್ಟಾಚಾರ, ಕುಟುಂಬ ಹಿತಕ್ಕೋಸ್ಕರ ಜನಸಾಮಾನ್ಯರ ಆಸ್ತಿ-ಸಂಪತ್ತನ್ನು ಲೂಟಿ ಮಾಡುವ ಮೂಲಕ ರಾಜ್ಯಕ್ಕೆ ಅಪಚಾರ ಮಾಡಿದ್ದಾರೆ ಎಂದು ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಆರೋಪಿಸಿದರು.

ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಜಿಲ್ಲಾ ಬಿಜೆಪಿ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಎದುರು ನಡೆದ ಪ್ರತಿಭಟನೆಯನ್ನುದ್ದೇಶಿಸಿ ಅವರು ಮಾತನಾಡುತ್ತಿದ್ದರು.

ಕಾನೂನು ಬಾಹಿರವಾಗಿ ಪರಶಿಷ್ಟ ಜಾತಿ ಜನರ ಭೂಮಿ ಖರೀದಿಸಿದ್ದಲ್ಲದೆ ತಮ್ಮ ಸ್ಥಾನಮಾನದ ಪ್ರಭಾವ ಬಳಸಿ ಮುಡಾದಿಂದ ಅಕ್ರಮವಾಗಿ ಸೈಟ್ ಪಡೆಯುವ ಮುಖಾಂತರ ತಮ್ಮ ಸಮಾಜವಾದಿ ಮುಖವಾಡವನ್ನು ಕಳಚಿಕೊಂಡಿದ್ದಾರೆ. ರಾಜ್ಯಪಾಲರ, ನ್ಯಾಯಾಲಯದ ಆದೇಶಗಳಿಗೆ ತಲೆಬಾಗಿ ಕೂಡಲೇ ಮುಖ್ಯಮಂತ್ರಿ ಹುದ್ದೆಗೆ ರಾಜೀನಾಮೆ ಕೊಟ್ಟು ತನಿಖೆಗೆ ಸಹಕರಿಸಬೇಕು ಎಂದು ಆಗ್ರಹಿಸಿದರು.

ನೂರಾರು ಸಂಖ್ಯೆಯಲ್ಲಿ ಸೇರಿದ್ದ ಬಿಜೆಪಿ ಕಾರ್ಯಕರ್ತರು ಜಿಲ್ಲಾಧಿಕಾರಿಗಳ ಕಚೇರಿ ಮುಂದಿನ ಹುಬ್ಬಳ್ಳಿ-ಗದಗ ರಸ್ತೆ ಬಂದ್ ಮಾಡುವ ಮೂಲಕ ಪ್ರತಿಭಟನೆ ಕೈಗೊಂಡು, ರಾಜ್ಯದ ಕಾಂಗ್ರೆಸ್ ಸರ್ಕಾರ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಘೋಷಣೆ ಕೂಗಿದರು. ಪ್ರತಿಭಟನೆ ಉದ್ದೇಶಿಸಿ ಮುಖಂಡ ಅಶೋಕ ನವಲಗುಂದ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಲ್ಲಾಪೂರ ಮಾತನಾಡಿದರು.



ಪ್ರತಿಭಟನೆಯಲ್ಲಿ ಪ್ರಮುಖರಾದ ನಾಗರಾಜ ಕುಲಕರ್ಣಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಫಕ್ಕೀರೇಶ ರಟ್ಟಿಹಳ್ಳಿ, ಜಗನ್ನಾಥಸಾ ಭಾಂಡಗೆ, ಭೀಮಸಿಂಗ್ ರಾಥೋಡ್, ವಿಜಯಕುಮಾರ್ ಗಡ್ಡಿ, ಸಿದ್ದಣ್ಣ ಪಲ್ಲೇದ, ಶಶಿಧರ್ ದಿಂಡೂರ್, ನಗರಸಭಾ ಸದಸ್ಯರಾದ ವಿನಾಯಕ ಮಾನ್ವಿ, ಪ್ರಕಾಶ್ ಅಂಗಡಿ, ವಿದ್ಯಾವತಿ ಗಡಿಗಿ, ವಿಜಯಲಕ್ಷ್ಮೀ ದಿಂಡೂರ, ಲಕ್ಷ್ಮೀ ಕಾಕಿ, ಮುತ್ತು ಮುಸಿಗೇರಿ, ಚಂದ್ರು ತಡಸದ, ಬೂದಪ್ಪ ಹಳ್ಳಿ, ಬದ್ರೇಶ ಕುಸ್ಲಾಪುರ, ಸುನಿಲ ಮಹಾಂತಶೆಟ್ಟರ, ಬಸವಣ್ಣಪ್ಪ ಚಿಂಚಲಿ, ಸಂತೋಷ ಅಕ್ಕಿ, ಪ್ರಶಾಂತ್ ನಾಯ್ಕರ್, ಅನಿಲ ಮುಳುಗುಂದ್, ದೇವೇಂದ್ರಪ್ಪ ಹೂಗಾರ್, ವಿಜಯಲಕ್ಷ್ಮೀ ಮಾನ್ವಿ, ರಮೇಶ್ ಸಜಗಾರ, ಸ್ವಾತಿ ಅಕ್ಕಿ, ಅಶೋಕ್ ಕರೂರು, ಸುರೇಶ್ ಚಿತ್ತರಗಿ, ಶಂಕರ್ ಕಾಕಿ, ರೇಖಾ ಬಂಗಾರಶೆಟ್ಟರ, ಯೋಗೇಶ್ವರಿ ಬಾವಿಕಟ್ಟಿ, ಅಮರ್ನಾಥ್ ಗಡಗಿ, ಶಿವು ಹಿರೇಮನಿಪಾಟೀಲ, ನವೀನ ಕೊಟೆಕಲ್, ವೆಂಕಟೇಶ ಹಬೀಬ, ವಗ್ಗನವರ, ಲಕ್ಷ್ಮಣ್ ದೊಡ್ಮನಿ, ರಾಜು ಹೊಂಗಲ್, ಡಿ.ಬಿ. ಕರಿಗೌಡ್ರು, ಜಾನು ಲಮಾಣಿ, ಶಕ್ತಿ ಕತ್ತಿ, ಸಂತೋಷ್ ಜಾವೂರ್, ಶಾರದಾ ಸಜ್ಜನ್ ಪಾರ್ವತಿ ಪಟ್ಟಣಶೆಟ್ಟಿ ಮುಂತಾದವರು ಉಪಸ್ಥಿತರಿದ್ದರು.

> ನಿಗಮ ಮಂಡಳಿ ಮಾಜಿ ಅಧ್ಯಕ್ಷ ಎಂ.ಎಸ್. ಕರಿಗೌಡ್ರ ಮಾತನಾಡಿ, ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರದ ಸಂಪುಟ ಸದಸ್ಯರು, ಸಿದ್ದರಾಮಯ್ಯ ಕುಟುಂಬ ಭ್ರಷ್ಟಾಚಾರದಲ್ಲಿ ತೊಡಗಿಕೊಂಡಿದ್ದು, ಕಳೆದ ಒಂದೂವರೆ ವರ್ಷದಲ್ಲಿ ಯಾವುದೇ ಹೊಸ ಕಾಮಗಾರಿಗಳು ನಡೆಯುತ್ತಿಲ್ಲ. ಕೆಲವು ಇಲಾಖೆ ನೌಕರರ ಸಂಬಳ ಆಗುತ್ತಿಲ್ಲ, ರಾಜ್ಯ ಅಭಿವೃದ್ಧಿಯಿಂದ ಹಿಂದೆ ಬಿದ್ದಿದೆ. ರಾಜ್ಯವನ್ನು ಕೊಳ್ಳೆ ಹೊಡೆದದ್ದು ಸಾಕು, ಜನ ಬೀದಿಗಿಳಿದು ಹೋರಾಟ ಮಾಡುವ ಮುನ್ನವೇ ಸಿದ್ದರಾಮಯ್ಯ ರಾಜೀನಾಮೆ ಕೊಡಲಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

### ಜಿಲ್ಲಾ ತಂಬಾಕು ನಿಷೇಧ ಕೋಶದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ

# ತಂಬಾಕು ಮುಕ್ತ ಯುವ ಅಭಿಯಾನಕ್ಕೆ ಚಾಲನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ತಂಬಾಕುಮುಕ್ತ ಯುವ ಅಭಿಯಾನವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು. ಈ ನಿಟ್ಟಿನಲ್ಲಿ ಇನ್ನೂ ಹೆಚ್ಚು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದರು.

ಪ್ರಸಕ್ತ ವರ್ಷ ಸೆಪ್ಟೆಂಬರ್ 24ರಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ತಂಬಾಕು ಮುಕ್ತ ಯುವ ಅಭಿಯಾನ 2.0 ರಾಷ್ಟ್ರೀಯ ಅಭಿಯಾನಕ್ಕೆ ಚಾಲನೆ ನೀಡಿದ್ದು, ಗದಗ ಜಿಲ್ಲೆಯಲ್ಲಿ ತಂಬಾಕು ಮುಕ್ತ ಯುವ ಅಭಿಯಾನ 2.0ಕ್ಕೆ ಜಿಲ್ಲಾಧಿಕಾರಿಗಳು ಬುಧವಾರ ಜಿಲ್ಲಾಡಳಿತ ಭವನದಲ್ಲಿ ಚಾಲನೆ ನೀಡಿ ಜಿಲ್ಲಾ ತಂಬಾಕು ನಿಷೇಧ ಕೋಶದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ಜಿಲ್ಲಾ ಸಮೀಕ್ಷಣಾಧಿಕಾರಿ ಹಾಗೂ ಎನ್‌ಟಿಸಿಪಿ ಕಾರ್ಯಕ್ರಮಾಧಿಕಾರಿಗಳಾದ ಡಾ.ವೆಂಕಟೇಶ ರಾಥೋಡ್ ಮಾತನಾಡಿ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಗದಗದಿಂದ ಹಮ್ಮಿಕೊಳ್ಳಲಾದ ಕಾರ್ಯಕ್ರಮಗಳ ಕುರಿತು ವಿವರಿಸುತ್ತಾ, ಜಿಲ್ಲೆಯಲ್ಲಿ ಕಳೆದ ವರ್ಷ ಒಟ್ಟು 35 ಶಾಲಾ/ಕಾಲೇಜುಗಳಲ್ಲಿ ತಂಬಾಕು ವ್ಯಸನದಿಂದಾಗುವ ದುಷ್ಪರಿಣಾಮ ಹಾಗೂ ಕೋಟ್ಪಾ ಕಾಯ್ದೆ ಕುರಿತು ಶಿಕ್ಷಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಆರೋಗ್ಯ-ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಶಾಲಾ-ಕಾಲೇಜುಗಳ ಮುಖ್ಯಸ್ಥರ ಅಧ್ಯಕ್ಷತೆಯಲ್ಲಿ ತಂಬಾಕು ನಿಯಂತ್ರಣ ಸಮಿತಿ ರಚನೆ ಮಾಡಲಾಗಿದೆ.

ಕೋಟ್ಪಾ ದಾಳಿ ಹಮ್ಮಿಕೊಳ್ಳುವುದರ ಮೂಲಕ ವ್ಯಾಪಾರಸ್ಥರು, ತಂಬಾಕು ಬಳಕೆದಾರರಿಗೆ ಹಾಗೂ ಸಾರ್ವಜನಿಕರಲ್ಲಿ ಕೋಟ್ಪಾ ಕಾಯ್ದೆ ಕುರಿತು ಜಾಗೃತಿ ಮೂಡಿಸಲಾಗಿದೆ ಹಾಗೂ ಈವರೆಗೆ 29 ಕೋಟ್ಪಾ ದಾಳಿ ನಡೆಸಿ 569 ಪ್ರಕರಣಗಳನ್ನು ದಾಖಲಿಸಿ ರೂ.90600/-ದಂಡ ಸಂಗ್ರಹಿಸಲಾಗಿದೆ. ಕೋಟ್ಪಾ ಅನುಷ್ಠಾನ ಕುರಿತು ವಿವಿಧ ಇಲಾಖೆಗಳ ಅಧಿಕಾರಿ ಸಿಬ್ಬಂದಿಗಳಿಗೆ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

▶▶ 4ನೇ ಪುಟಕ್ಕೆ

> ತಂಬಾಕು ನಿಯಂತ್ರಣ ಕಾಯ್ದೆ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಕೋಟ್ಪಾ ದಾಳಿಗಳನ್ನು ಹಮ್ಮಿಕೊಳ್ಳಬೇಕು. ತಂಬಾಕು ಮುಕ್ತ ಗ್ರಾಮ ಮತ್ತು ತಂಬಾಕು ಮುಕ್ತ ಶಾಲೆ/ಕಾಲೇಜು ಘೋಷಣೆಗೆ ಕ್ರಮ ಕೈಗೊಳ್ಳಲು ವಿವಿಧ ಇಲಾಖೆಯ ಮುಖ್ಯಸ್ಥರು ಕಾರ್ಯೋನ್ಮುಖರಾಗಬೇಕು. ಶಾಲಾ ಕಾಲೇಜುಗಳ ಒಳಾವರಣ ಮತ್ತು ಹೊರಗಡೆ ತಂಬಾಕು ಮಾರಾಟ ನಿಷೇಧದ ಕುರಿತು ಗೋಡೆ ಬರಹ ಬರೆಸಬೇಕು. ತಾಲೂಕಾ ಮಟ್ಟದಲ್ಲಿಯೂ ಸಹ ಈ ಕುರಿತು ಸಭೆ ಜರುಗಿಸಬೇಕು. ಬಸ್‌ಸ್ಟ್ಯಾಂಡ್ ಹಾಗೂ ಶಾಲಾ ಕಾಲೇಜುಗಳ ಪಕ್ಕದಲ್ಲಿ ತಂಬಾಕು ಮಾರಾಟ ಮಾಡದ ಹಾಗೆ ನೋಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

### ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಸೂಚನೆ

# ಬೀದಿ ನಾಯಿಗಳ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಬೀದಿ ನಾಯಿಗಳ ಹಾವಳಿಯನ್ನು ತಡೆಗಟ್ಟಿ, ರೇಬಿಸ್ ರೋಗ ನಿಯಂತ್ರಣಕ್ಕೆ ಸ್ಥಳೀಯ ಸಂಸ್ಥೆಯವರು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಷ್ಟ್ರೀಯ ರೇಬಿಸ್ ನಿಯಂತ್ರಣ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು. ನಾಯಿ ಕಡಿತದ ಪ್ರಕರಣಗಳಿಗೆ ಜಿಲ್ಲೆಯ ಎಲ್ಲ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ, ಸಮುದಾಯ ಆರೊಗ್ಯ ಕೇಂದ್ರಗಳಲ್ಲಿ, ತಾಲೂಕು ಆಸ್ಪತ್ರೆ ಮತ್ತು ಜಿಲ್ಲಾ ಆಸ್ಪತ್ರೆಯಲ್ಲಿ ಪೂರ್ಣ ಪ್ರಮಾಣದ ಲಸಿಕೆಗಳು ಲಭ್ಯವಿದ್ದು, ಲಸಿಕೆ ಹಾಕಿಸಿಕೊಳ್ಳಲು ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕೆಂದು ನಿರ್ದೇಶನ ನೀಡಿದರು.

▶▶ 4ನೇ ಪುಟಕ್ಕೆ



> ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವೆಂಕಟೇಶ ರಾಠೋಡ ಮಾತನಾಡಿ, ವಿಶ್ವ ಆರೋಗ್ಯ ಸಂಸ್ಥೆಯು 14-8-2024ರಂದು ಮಂಕಿಪಾಕ್ಸ್‌ನ್ನು ಅಂತಾರಾಷ್ಟ್ರಿಯ ಕಾಳಜಿಯ ಸಾರ್ವಜನಿಕ ಆರೋಗ್ಯ ತುರ್ತು ಸ್ಥಿತಿ ಎಂದು ಘೋಷಿಸಿದೆ. ಈ ಹಿನ್ನೆಲೆಯಲ್ಲಿ ಜಿಲ್ಲೆಯ ಎಲ್ಲ ವೈದ್ಯಾಧಿಕಾರಿಗಳಿಗೆ ಹಾಗೂ ಸಿಬ್ಬಂದಿಗಳಿಗೆ ತರಬೇತಿ ನೀಡಲಾಗಿದೆ. ಜಿಲ್ಲೆಯಲ್ಲಿ ಜನೆವರಿ 202 ರಿಂದ ಅಗಸ್ಟ್ 2024ರವರೆಗೆ 3007 ಕರುಳು ಬೇನೆ ಪ್ರಕರಣಗಳು, 245 ಡೆಂಘೀ ಹಾಗೂ 10 ಚಿಕುನ್ ಗುನ್ಯಾ ಪ್ರಕರಣಗಳು ವರದಿಯಾಗಿವೆ ಎಂದು ಸಭೆಗೆ ತಿಳಿಸಿದರು.

### ಸಾಕ್ಷಿ ಸುಭಾಷಿತ

**ಜೀವನದಲ್ಲಿ ಸಂಬಂಧಗಳು ಯಾವುದೇ ಕಷ್ಟ, ನೋವುಗಳನ್ನು ಹಂಚಿಕೊಳ್ಳುವ ಹಾಗೆ ಇರಬೇಕೆ ವಿನಃ ನೋವು ಹೆಚ್ಚಿಸುವ ಹಾಗೆ ಇರಬಾರದು.**

**–ಸುಭಾಷಿತ**

## ಸಂಪಾದಕೀಯ

# ಸಿದ್ದರಾಮಯ್ಯಗೆ ಈಗ ಸಂಕಷ್ಟ

ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ನಿಜವಾಗಿಯೂ ಸಂಕಷ್ಟ ಎದುರಾಗಿದ್ದು ಈಗ. ರಾಜ್ಯಪಾಲರು ನೀಡಿದ ಅನುಮತಿ ಸರಿಯಾಗಿದೆ ಎಂದು ಹೈಕೋರ್ಟ್ ತೀರ್ಪು ನೀಡಿದ ಬೆನ್ನಲ್ಲೆ, ಜನಪ್ರತಿನಿಧಿಗಳ ನ್ಯಾಯಾಲಯವೂ ತನಿಖೆ ನಡೆಸುವಂತೆ ಆದೇಶಿಸಿದ್ದರಿಂದ ಸಿದ್ದರಾಮಯ್ಯ ನಿಜವಾಗಿಯೂ ಸಂಕಷ್ಟಕ್ಕೆ ಸಿಲುಕಿದ್ದಾರೆ.

ಹೈಕೋರ್ಟ್ ಏಕಸದಸ್ಯ ಪೀಠದ ಆದೇಶ ಪ್ರಶ್ನಿಸಿ, ತ್ರಿಸದಸ್ಯ ಪೀಠದ ಮುಂದೆ ಮೇಲ್ಮನವಿ ಸಲ್ಲಿಸುವ ಮುನ್ನ, ಜನಪ್ರತಿನಿಧಿಗಳ ನ್ಯಾಯಾಲಯಕ್ಕೂ ಸಿಎಂ ಸಿದ್ದರಾಮಯ್ಯ ಮೊರೆ ಹೋಗಿದ್ದರು. ಆದರೆ ಜನಪ್ರತಿನಿಧಿಗಳ ನ್ಯಾಯಾಲಯ ಒಂದು ಹೆಜ್ಜೆ ಮುಂದೆ ಹೋಗಿ ಮೂರು ತಿಂಗಳಲ್ಲಿ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಲೋಕಾಯುಕ್ತರಿಗೆ ಸೂಚನೆ ನೀಡಿದ್ದು, ಸಿದ್ದರಾಮಯ್ಯ ಅವರ ಚಿಂತೆಗೆ ಕಾರಣವಾಗಿದೆ.

ರಾಜ್ಯದ ಎರಡು ಉಚ್ಚ ನ್ಯಾಯಾಲಯದಲ್ಲಿ ಸಿದ್ದರಾಮಯ್ಯ ವಿರುದ್ಧವಾದ ತೀರ್ಪುಗಳು ಹೊರಬಂದಿರುವುದು ನೋಡಿದರೆ, ಹೈಕೋರ್ಟ್ ತ್ರಿ ಸದಸ್ಯ ಪೀಠದ ಅಭಿಪ್ರಾಯವೂ ಇದೇ ರೀತಿಯಲ್ಲಿ ವ್ಯಕ್ತವಾಗುವ ಸಾಧ್ಯತೆಗಳು ದಟ್ಟವಾಗಿದೆ. ಈ ಕುರಿತೂ ನಿನ್ನೆಯೂ ವಿಜಯಸಾಕ್ಷಿ ಇದೆ ಅಭಿಪ್ರಾಯವನ್ನು ವ್ಯಕ್ತಪಡಿಸಿತ್ತು.

ಸದ್ಯ ಎರಡು ಕೋರ್ಟ್ ಗಳ ತೀರ್ಪು ಸಿದ್ದರಾಮಯ್ಯ ಅವರಿಗೆ ವ್ಯತಿರಿಕ್ತವಾಗಿ ಬಂದ ನಂತರ ಸಿದ್ದರಾಮಯ್ಯ ತಲೆದಂಡಕ್ಕೆ ಒತ್ತಡಗಳು ಹೆಚ್ಚಾಗುತ್ತಿವೆ. ಪ್ರತಿಪಕ್ಷದ ನಾಯಕರು ಮಾತ್ರ ಸಿದ್ದರಾಮಯ್ಯ ಅವರ ನೈತಿಕತೆಯನ್ನು ಪ್ರಶ್ನಿಸಿ ರಾಜೀನಾಮೆ ಕೇಳುತ್ತಿದ್ದಾರೆ.

ರಾಜಕೀಯೇತರ ಅನೇಕ ನಾಯಕರು ಸಹ ಸಿದ್ದರಾಮಯ್ಯ ರಾಜೀನಾಮೆ ಕೊಟ್ಟು ತನಿಖೆ ಎದುರಿಸಲಿ ಎಂದೇ ಅಭಿಪ್ರಾಯಪಟ್ಟಿದ್ದಾರೆ. ಆದರೆ ಕೆಲ ಹಿಂದುಳಿದ ಸಮುದಾಯಗಳು, ಸಿದ್ದರಾಮಯ್ಯ ಯಾವುದೇ ಕಾರಣಕ್ಕೂ ರಾಜೀನಾಮೆ ಕೊಡುವುದು ಬೇಡ ಎನ್ನುತ್ತಿದ್ದಾರೆ. ಆದರೆ ತನಿಖೆ ಆರಂಭವಾದರೆ ಸಿದ್ದರಾಮಯ್ಯ ಅವರಿಗೆ ರಾಜೀನಾಮೆ ಕೊಡಬೇಕಾದ ಒತ್ತಡ ಮತ್ತಷ್ಟು ಹೆಚ್ಚಾಗುತ್ತದೆ.

ಸಿದ್ದರಾಮಯ್ಯ ರಾಜೀನಾಮೆ ಕೊಡಬೇಕೋ ಬೇಡವು ಎನ್ನುವುದು ಇನ್ನೂ ನಿರ್ಧಾರ ಆಗಿಲ್ಲ. ಯಾವುದೇ ಕಾರಣಕ್ಕೂ ರಾಜೀನಾಮೆ ಕೊಡುವುದಿಲ್ಲ ಎಂದು ಸಿದ್ದರಾಮಯ್ಯ ಸ್ಪಷ್ಟವಾಗಿ ಹೇಳಿದ್ದಾರೆ. ಆದಾಗ್ಯೂ ಕಾಂಗ್ರೆಸ್ ಪಾಳಯದಲ್ಲಿ ಕೆಲವರು ಸಿಎಂ ಕುರ್ಚಿ ಕನಸು ಕಾಣುತ್ತಿದ್ದಾರೆ. ಇದು ಸಹ ಸಿದ್ದರಾಮಯ್ಯ ಅವರಿಗೆ ಸಂಕಷ್ಟವೇ.

## ರಂಭಾಪುರಿ ದಸರೆಯಲ್ಲಿ ದಯಪಾಲಿಸುವ ಪ್ರಶಸ್ತಿ ವಿಜೇತರ ಪರಿಚಯ

# ರಂಭಾಪುರಿ ಪೀಠದ ಪಂಚ ರತ್ನಗಳು



**ಶಿವಾಚಾರ್ಯ ರತ್ನ:** ಎಡೆಯೂರು ಕ್ಷೇತ್ರ ಶಿವಾಚಾರ್ಯ ಸಂಕುಲದ ಭೀಷ್ಮರೆಂದೇ ಪ್ರಸಿದ್ಧರಾದ ಶ್ರೀ ಷ. ಬ್ರ. ರೇಣುಕ ಶಿವಾಚಾರ್ಯ ಸ್ವಾಮಿಗಳವರು ತರೀಕೆರೆ ತಾಲೂಕಿನ ಗೊಂಡೇದಹಳ್ಳಿಯ ಶ್ರೀ ವೇ. ಮರಿದೇವರು ಮತ್ತು ಶ್ರೀಮತಿ ಹಾಲಮ್ಮನವರ 4ನೇ ಸುಪುತ್ರರಾಗಿ ಜನಿಸಿದರು. ಬಾಲ್ಯದಲ್ಲಿಯೇ ತಮ್ಮ ಮಾತಾಪಿತೃಗಳ ವಿಯೋಗವಾದ ಸಂದರ್ಭದಲ್ಲಿ ತಾವರೆಕೆರೆ ಶಿಲಾಮಠದ ಶ್ರೀ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳವರ ಗರಡಿಯಲ್ಲಿ ಬಾಲ್ಯವನ್ನು ಕಳೆದರು.

ಶ್ರೀಮದ್ವೀರಶೈವ ಶಿವಯೋಗಮಂದಿರದಲ್ಲಿ ವಿದ್ಯಾಭ್ಯಾಸ ಮಾಡಿ ಯೋಗ ಮತ್ತು ಶಿವಯೋಗದ ತರಬೇತಿ ಪಡೆದವರು. ತಾವರೆಕೆರೆ ಶ್ರೀ ಶಿಲಾಮಠಕ್ಕೆ 1976ರಲ್ಲಿ ಶ್ರೀಗುರು ಪಟ್ಟಾಧಿಕಾರ ಹೊಂದಿ, ಧರ್ಮ ಕಟ್ಟುವ ಕಾರ್ಯಕ್ಕೆ ಮುಂದಡಿ ಇಟ್ಟವರು. ಹಲವಾರು ಸವಾಲುಗಳನ್ನು ಎದುರಿಸಿ ವೀರಶೈವ ಧರ್ಮದ ಪ್ರಚಾರದ ಜೊತೆಗೆ ಜನರಲ್ಲಿ ಧಾರ್ಮಿಕ ಪ್ರಜ್ಞೆಯನ್ನು ಜಾಗೃತಗೊಳಿಸಿದರು. ಶ್ರೀ ರಂಭಾಪುರಿ ಪೀಠದ ಜಗದ್ಗುರುತ್ರಯರ ಸೇವಾ ವಲ್ಲರಿಯಲ್ಲಿ ಅತ್ಯಂತ ಹತ್ತಿರದವರಾಗಿದ್ದುಕೊಂಡು ಉತ್ತಮ ನಡೆ–ನುಡಿಗಳನ್ನು ಒಡಮೂಡಿಸಿಕೊಂಡವರು.

ಸತತ ಪಾದರಸದಂತೆ ಧರ್ಮಶೀಲತೆಯಲ್ಲಿ ಮುನ್ನಡೆಯುತ್ತಿರುವ ಶ್ರೀಗಳವರ ಸೇವಾಭಿಮಾನನಿಷ್ಠೆ ಮತ್ತು ಗುರುಭಕ್ತಿಯನ್ನು ಮನಗಂಡ ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠವು ಗದಗ ಜಿಲ್ಲೆ ರೋಣ ತಾಲೂಕಿನ ಅಬ್ಬಿಗೇರಿ ಗ್ರಾಮದಲ್ಲಿ ನಡೆಯುವ 2024ನೇ ಸಾಲಿನ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದಲ್ಲಿ 'ಶಿವಾಚಾರ್ಯ ರತ್ನ' ಎಂಬ ಪ್ರಶಸ್ತಿಯನ್ನಿತ್ತು ಆಶೀರ್ವದಿಸುತ್ತಿದೆ.




**ಸಾಧನಸಿರಿ:** ತಮ್ಮ ಉಪದೇಶಾಮೃತದ ಮೂಲಕ ಜನರಲ್ಲಿ ಜಾಗೃತಿ ಮತ್ತು ಬದಲಾವಣೆಯನ್ನುಂಟು ಮಾಡುತ್ತ ಒಬ್ಬ ಸರಳ ಮತ್ತು ವಿರಳ ಸಾಧಕರಾಗಿ ಮುನ್ನಡೆಯುತ್ತಿರುವವರೇ ಗದಗ ಜಿಲ್ಲೆಯ ಗಜೇಂದ್ರಗಡ ತಾಲೂಕಿನ ನರೇಗಲ್ಲ ಹಿರೇಮಠದ ಶ್ರೀ ಷ. ಬ್ರ. ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು. ಪ್ರಾಥಮಿಕ ಶಿಕ್ಷಣವನ್ನು ಸ್ವಗ್ರಾಮದಲ್ಲಿ ಅಧ್ಯಯನ ಮಾಡಿ ತಮ್ಮ 13ನೇ ವಯಸ್ಸಿನಲ್ಲಿಯೇ ಶ್ರೀಮದ್ ಉಜ್ಜಯಿನಿ ಜಗದ್ಗುರುಗಳ ಅಪ್ಪಣೆಯಂತೆ ದೀಕ್ಷಾ ಸಂಸ್ಕಾರ ಹೊಂದಿ ಸ್ವಾಮಿತ್ವಕ್ಕೆ ಅಡಿಯಿಟ್ಟವರು.

ನಂತರ ಧರ್ಮ–ಆಧ್ಯಾತ್ಮ ಶಿಕ್ಷಣಕ್ಕಾಗಿ ಹೊನ್ನಾಳಿ ಹಿರೇಕಲ್ಮಠದಲ್ಲಿ ಪ್ರವೇಶ ಪಡೆದು ಪ್ರೌಢಶಾಲೆ ಹಾಗೂ ಸಂಸ್ಕೃತ, ಆಧ್ಯಾತ್ಮ ಶಿಕ್ಷಣ ಪೂರೈಸಿದರು. ಉನ್ನತ ವ್ಯಾಸಂಗವನ್ನು ಮೈಸೂರಿನ ಜೆ.ಎಸ್.ಎಸ್. ಗುರುಕುಲದಲ್ಲಿ ಹಾಗೂ ಅರಮನೆ ಜಪದಕಟ್ಟೆಮಠದಲ್ಲಿ ಪೂರ್ಣಗೊಳಿಸಿದರು. ರಾಜ್ಯ ಮತ್ತು ಹೊರರಾಜ್ಯಗಳಲ್ಲಿ ಸಂಚರಿಸಿ ವೀರಶೈವ ಧರ್ಮ, ಶಿವಾದ್ವೈತ ಸಿದ್ಧಾಂತ, ವೀರಶೈವ ಲಿಂಗಾಯತ ಪರಂಪರೆಯ ಪುರಾಣ–ಪ್ರವಚನಗಳನ್ನು ಪ್ರಸ್ತುತಪಡಿಸುತ್ತ ಜನರ ಪ್ರೀತಿಗೆ ಪಾತ್ರರಾಗಿರುವ ಶ್ರೀಗಳವರಿಗೆ ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠವು ಗದಗ ಜಿಲ್ಲೆ ರೋಣ ತಾಲೂಕಿನ ಅಬ್ಬಿಗೇರಿ ಗ್ರಾಮದಲ್ಲಿ ನಡೆಯುವ 2024ನೇ ಸಾಲಿನ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದಲ್ಲಿ 'ಸಾಧನ ಸಿರಿ' ಎಂಬ ಪ್ರಶಸ್ತಿಯನ್ನಿತ್ತು ಆಶೀರ್ವದಿಸುತ್ತಿದೆ.



**ಸಾಹಿತ್ಯ ಸಿರಿ:** ತೆಲಂಗಾಣ ರಾಜ್ಯದ ಕೋಸ್ಗಿ ಗ್ರಾಮದಲ್ಲಿ ಜನಿಸಿದ ಆರ್. ಎಮ್. ಪ್ರಭುಲಿಂಗಶಾಸ್ತ್ರಿಗಳವರು ಚಿಕ್ಕವರಿದ್ದಾಗಲೇ ಅಧ್ಯಯನ ಕುರಿತು ಹೆಚ್ಚು ಒಲವು ಮೂಡಿಸಿಕೊಂಡು, ಶಾಲಾ–ಕಾಲೇಜುಗಳ ವಿವಿಧ ಸ್ಪರ್ಧೆಗಳಲ್ಲಿ ಮುಂಚೂಣಿಯಲ್ಲಿದ್ದು ಗೆಲುವು ಹೊಂದಿದವರು. ಎಮ್ಎ. ಇಂಗ್ಲೀಷ್ ಪದವೀದರರಾಗಿ ವೀರಶೈವ ಸಿದ್ಧಾಂತದ ಕುರಿತು ವಿಶೇಷ ಅಧ್ಯಯನ ನಡೆಸಿದ್ದಲ್ಲದೇ ತಾವೊಬ್ಬ ಅಬಕಾರಿ ಇಲಾಖೆಯ ಅಧಿಕಾರಿಯಾಗಿ ಅತ್ಯುತ್ತಮ ಕಾರ್ಯ ಮಾಡಿ ಎಲ್ಲರ ಮನ ಗೆದ್ದವರಾಗಿದ್ದಾರೆ.

ಸಧ್ಯ ವೃತ್ತಿ ಜೀವನದಿಂದ ನಿವೃತ್ತರಾಗಿರುವ ಶಾಸ್ತ್ರಿಗಳವರು ಸ್ವಾಭಿಮಾನದ ಜೀವನ ಸಾಗಿಸುತ್ತ ಸಾಹಿತ್ಯ ಕ್ಷೇತ್ರದಲ್ಲಿ ನಿರಂತರ ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸುತ್ತಿರುವ ಶ್ರೀಯುತರ ಸಾಹಿತ್ಯ ರಚನಾಶೀಲತೆ ಮತ್ತು ಧರ್ಮಾಚಾರಶೀಲತೆಯನ್ನು ಅವಗಾಹಿಸಿ ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠವು 2024ನೇ ಸಾಲಿನ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದಲ್ಲಿ 'ಸಾಹಿತ್ಯ ಸಿರಿ' ಎಂಬ ಪ್ರಶಸ್ತಿಯನ್ನಿತ್ತು ಆಶೀರ್ವದಿಸುತ್ತಿದೆ.



**ವೀರಶೈವ ಸಿರಿ:** ವ್ಯಕ್ತಿ ಜೀವನದಲ್ಲಿ ಪರಿಶ್ರಮ ಪಟ್ಟರೆ ಏನಾದರೂ ಸಾಧಿಸಬಲ್ಲ ಎಂಬ ಮಾತಿಗನ್ವರ್ಥಕವಾಗಿ ಬೆಳೆದು ನಿಂತವರೇ ರೋಣ ಕ್ಷೇತ್ರದ ಜನಾನುರಾಗಿ ಶಾಸಕರಾದ ಜಿ.ಎಸ್. ಪಾಟೀಲರು. ರೋಣ ಪ್ರಾಂತದ ಪಾಟೀಲ ಮನೆತನದಲ್ಲಿ ಜನಿಸಿದ ಗುರುಪಾದಗೌಡ ಸಂಗನಗೌಡ ಪಾಟೀಲರು ಬಾಲ್ಯದಿಂದಲೇ ಉತ್ತಮ ನಡೆ–ನುಡಿಗಳನ್ನು ರೂಢಿಸಿಕೊಂಡು ಬೆಳೆದವರು.

ಧಾರವಾಡದಲ್ಲಿ ಶಿಕ್ಷಣ ಪೂರೈಸಿ ಕ್ರೀಡೆ ಮತ್ತು ಸಂಘಟನೆಯಲ್ಲಿ ತೊಡಗಿಸಿಕೊಂಡವರು. ಪ್ರಾಂತ ಮಟ್ಟದಲ್ಲಿ ತಲೆದೋರಿದ್ದ ಅನೇಕ ಸಮಸ್ಯೆಗಳಿಗೆ ಪರಿಹಾರ ಕಂಡು ಹಿಡಿಯುವಲ್ಲಿ ಮುಂಚೂಣಿಯಲ್ಲಿದ್ದು ಎಲ್ಲವನ್ನೂ ನಿವಾರಿಸಿ ಜನನಾಯಕರಾಗಿ ಹೊಮ್ಮಿದವರು. ಮುಂದುವರೆದು 1983ರಲ್ಲಿ ರಾಜಕೀಯ ಪ್ರವೇಶ ಮಾಡಿ ಅನೇಕ ಸುಧಾರಣೆಗಳಿಗೆ ನಾಂದಿ ಹಾಡಿದ ಪಾಟೀಲರು, ಮೂರು ಬಾರಿ ಶಾಸಕರಾಗಿ ಜನರಿಂದ ಮನ್ನಣೆ ಪಡೆದು, ಕನ್ನಡ ಕಟ್ಟುವ ಕಾರ್ಯದಲ್ಲಿ, ಧರ್ಮ–ಸಂಸ್ಕೃತಿಗಳ ಜಾಗೃತಿ ಕಾರ್ಯಕ್ರಮಗಳಲ್ಲಿ, ವಿವಿಧ ಸಮಾವೇಶ–ಸಮ್ಮೇಳನಗಳಲ್ಲಿ ಮುಂಚೂಣಿಯಾಗಿದ್ದುಕೊಂಡು ಎಲ್ಲವುಗಳನ್ನೂ ಯಶಸ್ವಿಯಾಗಿ ನಿಭಾಯಿಸಿದ ಧೀಮಂತರು.

ಮೂರು ತಲೆಮಾರುಗಳಿಂದ ಪಂಚಪೀಠಗಳ ಜಗದ್ಗುರುಗಳವರ ಸೇವಾಭಿಲಾಷೆಯಲ್ಲಿ ಮುನ್ನಡೆಯುತ್ತಿರುವ ಪಾಟೀಲ ಮನೆತನದ ಪುತ್ರರತ್ನರಾದ ಪಾಟೀಲರದು ಅತ್ಯಂತ ಸರಳ, ಸವಿನಯ ಸ್ವಭಾವದವರು. ಸತತ ರಾಜಕಾರಣ ಮತ್ತು ಸಮಾಜದ ಜೊತೆ–ಗಿದ್ದು ಸೇವಾಕಾರ್ಯ ಮಾಡುತ್ತಿರುವ ಜಿ.ಎಸ್. ಪಾಟೀಲರವರಿಗೆ ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠವು 2024ನೇ ಸಾಲಿನ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದಲ್ಲಿ 'ವೀರಶೈವ ಸಿರಿ' ಎಂಬ ಪ್ರಶಸ್ತಿಯನ್ನಿತ್ತು ಆಶೀರ್ವದಿಸುತ್ತಿದೆ.



**ರಂಭಾಪುರಿ ಯುವಸಿರಿ:** ದಾವಣಗೆರೆ ಜಿಲ್ಲೆಯ ಹಿರೇತೊಗಲೇರಿ ಗ್ರಾಮದ ಹೆಚ್.ಎಮ್. ಚನ್ನಬಸಯ್ಯ, ಸೌಭಾಗ್ಯಮ್ಮನವರ ಹಿರಿಯ ಸುಪುತ್ರರಾದ ಹೆಚ್.ಎಮ್. ಬಸವರಾಜಯ್ಯನವರು ಹಲವು ಏಳು–ಬೀಳುಗಳನ್ನು ಕಂಡು, ತಮ್ಮ ಚಿಕ್ಕಪ್ಪನವರಾದ ಅಕ್ಕಿ ವ್ಯಾಪಾರ ಮಳಿಗೆಯಲ್ಲಿ ಗುಮಾಸ್ತರಾಗಿ ಸೇರಿಕೊಂಡರು. ವೃತ್ತಿಯ ವ್ಯಾಪ್ತಿ ವಿಸ್ತಾರಗೊಂಡಂತೆ 2008 ರಲ್ಲಿ ಸ್ವಯಂ ಬಂಡವಾಳ ಹೂಡಿ ಬ್ರೋಕರ್ ಏಜೆನ್ಸಿ ತೆರೆದರು. ತಂದೆಯವರ ಕಾಲದಿಂದಲೂ ಶ್ರೀ ರಂಭಾಪುರಿ ಪೀಠಕ್ಕೆ ನಿರಂತರ ಸೇವೆ ಮಾಡಿಕೊಂಡು ಬಂದಿದ್ದ ವ್ಯವಸ್ಥೆಯಂತೆ ತಂದೆಯವರಂತೆಯೇ ಅಕ್ಕಿರಾಜುರವರೂ ಸಹ ಯಾವುದೇ ಸೇವೆ ಬರಲಿ ಪ್ರಸಾದವೆಂದು ಸ್ವೀಕರಿಸಿ ನಿಸ್ವಾರ್ಥಯುತವಾಗಿ ಮಾಡುತ್ತ ಬಂದವರು.

ಇನ್ನಷ್ಟು ಮತ್ತಷ್ಟು ಧರ್ಮಪರ ಸೇವಾಕಾರ್ಯಗಳನ್ನು ಮಾಡುವ ಮನೋಭಿಲಾಷಿಗಳಾಗಿರುವ ಶ್ರೀಯುತರ ಗುರುಸೇವಾ ಕಿಂಕರತೆ ಮತ್ತು ಕಾರ್ಯನಿಷ್ಠೆಯನ್ನು ಅವಗಾಹಿಸಿ ಶ್ರೀ ರಂಭಾಪುರಿ ಪೀಠವು 2024ನೇ ಸಾಲಿನ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದಲ್ಲಿ 'ರಂಭಾಪುರಿ ಯುವಸಿರಿ' ಎಂಬ ಪ್ರಶಸ್ತಿಯನ್ನಿತ್ತು ಆಶೀರ್ವದಿಸುತ್ತಿದೆ.

**– ಡಾ. ಗುರುಪಾದಯ್ಯ ವೀ.ಸಾಲಿಮಠ,** ಸವಣೂರು.

# ಪುರಸಭೆಯ ಸದಸ್ಯರನ್ನು ಹುಡುಕಿಕೊಡಿ!



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿ ಒಂದೂವರೆ ತಿಂಗಳಿಂದ ಕುಡಿಯುವ ನೀರಿನ ಪೂರೈಕೆ ಸಂಪೂರ್ಣ ಸ್ಥಗಿತವಾಗಿದ್ದರೂ ಈ ಬಗ್ಗೆ ಗಮನ ಹರಿಸದ ಪುರಸಭೆಯ ಆಡಳಿತ ಮಂಡಳಿಯ ಸದಸ್ಯರು ಸಾರ್ವಜನಿಕರಿಂದ ತಪ್ಪಿಸಿಕೊಡು ಓಡಾಡುತ್ತಿದ್ದಾರೆ. ಪುರಸಭೆಯ ಸದಸ್ಯರನ್ನು ಪತ್ತೆ ಮಾಡಿಕೊಡಬೇಕೆಂಬ ವಿಶೇಷ ಮನವಿ ಪತ್ರವನ್ನು ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣಶೆಟ್ಟಿ ಬಣದಿಂದ ಪಟ್ಟಣದ ಪೊಲೀಸ್ ಠಾಣೆಗೆ ಸಲ್ಲಿಸಿದ್ದಾರೆ.

ಮನವಿ ಪತ್ರದಲ್ಲಿ ಪಟ್ಟಣದಲ್ಲಿ ಕಳೆದ ಹಲವು ತಿಂಗಳಿಂದ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸಿದೆ. ಅಭಿವೃದ್ಧಿ ಕಾಮಗಾರಿಗಳು ಅರ್ಧಕ್ಕೆ ನಿಂತಿದ್ದು, ಪುರಸಭೆಗೆ ಗ್ರಹಣ ಹಿಡಿದಂತಾಗಿದೆ. ಸಾಕಷ್ಟು ಸಮಸ್ಯೆಗಳು, ಸಾರ್ವಜನಿಕರ ಬೇಕು–ಬೇಡಿಕೆಗಳಿಗೆ ಸ್ಪಂದಿಸಬೇಕಾದ ಸದಸ್ಯರು ಎಲ್ಲಿ ಹೋಗಿದ್ದಾರೋ ಎಂಬ ಸಂಶಯ ಸಾರ್ವಜನಿಕರನ್ನು ಕಾಡುತ್ತಿದೆ. ಆಡಳಿತ ಮಂಡಳಿಯ ಅನುಮತಿಯಿಲ್ಲವೆಂಬ ಕಾರಣವನ್ನು ಹೇಳಿ ಮುಖ್ಯಾಧಿಕಾರಿಗಳು ಜಾಣ ಮೌನ ವಹಿಸುತ್ತಾರೆ. ಆದ್ದರಿಂದ ದಯವಿಟ್ಟು ಪುರಸಭೆ ಸದಸ್ಯರನ್ನು ಹುಡುಕಿಕೊಡಬೇಕು ಎಂದು ಮನವಿಯಲ್ಲಿ ಕೋರಿದರು.

ಈ ಸಂದರ್ಭದಲ್ಲಿ ಕರವೇ ತಾಲೂಕಾಧ್ಯಕ್ಷ ಮಹೇಶ ಕಲಘಟಗಿ, ಅಂಬರೇಶ ಗಾಂಜಿ, ಅರ್ಜುನ ಭಾಂಡಗೆ, ಶ್ರೇಯಾಂಕ ಹಿರೇಮಠ, ಸುಷ್ಮಾ ಸರ್ವದೆ, ಪ್ರವೀಣ ದಶಮನಿ, ಭರಮಣ್ಣ ಗೌಳಿ, ಗಿರೀಶ ಗೌಳಿ, ಮಹೇಶ ಕರಮಣ್ಣವರ, ಮಂಜುನಾಥ ಗಾಂಜಿ, ಚಂದ್ರು ಪಾಣಿಗಟ್ಟಿ, ಗೋವಿಂದ ಗೋಸಾವಿ, ತೇಜು ಉದ್ದನಗೌಡ್ರ, ಕುಮಾರ ಕನವಳ್ಳಿ, ಕುಮಾರ ಶೆಟ್ಟರ, ಲತಾ ಅಕ್ಕಸಾಲಿ, ತೇಜಸ್ವಿನಿ ಗುರಪ್ಪಗೌಡ್ರ ಸೇರಿ ಹಲವರಿದ್ದರು.

## ಪೌರ ಕಾರ್ಮಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ಶಾಸಕ ಜಿ.ಎಸ್. ಪಾಟೀಲ

# ಪೌರ ಕಾರ್ಮಿಕರ ಬಗ್ಗೆ ಕಾಳಜಿಯಿರಲಿ

**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಪಟ್ಟಣದ ಸ್ವಚ್ಛತೆಗೆ ಅವಿರತವಾಗಿ ಶ್ರಮಿಸುತ್ತಿರುವ ಪೌರ ಕಾರ್ಮಿಕರಿಗೆ ಗೌರವ, ಸೌಜನ್ಯ ಹಾಗೂ ಕಾಳಜಿ ತೋರುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಪಟ್ಟಣದ ಟಿಟಿಡಿ ಕಲ್ಯಾಣ ಮಂಟಪದಲ್ಲಿ ಪುರಸಭೆ ಕಾರ್ಯಾಲಯದಿಂದ ನಡೆದ 13ನೇ ವರ್ಷದ ಪೌರ ಕಾರ್ಮಿಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಪಟ್ಟಣದಲ್ಲಿ ಸ್ವಚ್ಛತೆ ಕಾಪಾಡುವ ಪೌರ ಕಾರ್ಮಿಕರ ನೇಮಕಕ್ಕೆ ಸರ್ಕಾರ ಮುಂದಾಗಿದ್ದರ ಪರಿಣಾಮ ಮೊದಲ ಹಂತದಲ್ಲಿ 11 ಸಾವಿರ ಪೌರ ಕಾರ್ಮಿಕರನ್ನು ಖಾಯಂಗೊಳಿಸಿದ್ದು, ಪಟ್ಟಣದಲ್ಲಿ ಕಾರ್ಯ ನಿರ್ವಹಿಸುತ್ತಿರುವ 31 ಪೌರ ಕಾರ್ಮಿಕರನ್ನು ಖಾಯಂ ನೌಕರನ್ನಾಗಿ ನೇಮಕ ಮಾಡಲಾಗಿದೆ. ಕಾರ್ಮಿಕರ ಸಮಸ್ಯೆಗಳು ಹಾಗೂ ಬೇಡಿಕೆಗಳು ಚರ್ಚೆಗೆ ಬಂದ ಸಂದರ್ಭದಲ್ಲಿ ವಿಧಾನಸಭೆ ಸೇರಿ ಇತರ ಸ್ಥಳಗಳಲ್ಲಿ ನಿಮ್ಮ ಪರವಾಗಿ ಹೋರಾಟದ ಜತೆ–ಗೆ ನಿಮ್ಮ ನ್ಯಾಯ ಸಮ್ಮತ ಬೇಡಿಕೆಗಳ ಈಡೇರಿಕೆಗೆ ಧ್ವನಿಗೂಡಿಸಿದ್ದೇನೆ ಎಂದರು.

ಪುರಸಭೆ ಅಧ್ಯಕ್ಷ ಸುಭಾಸ ವ್ಯಾಗೇರಿ, ಉಪಾಧ್ಯಕ್ಷೆ ಸವಿತಾ ಬಿದರಳ್ಳಿ, ಪೌರ ಕಾರ್ಮಿಕರ ಸಂಘದ ಶಾಖಾಧ್ಯಕ್ಷ ಸಿ.ಡಿ. ದೊಡ್ಡಮನಿ, ಉಪಾಧ್ಯಕ್ಷ ಶಿವಪ್ಪ ಮಾದರ, ಮುಖಂಡರಾದ ಅಶೋಕ ಬಾಗಮಾರ, ಸಿದ್ದಪ್ಪ ಬಂಡಿ, ಶಿವರಾಜ ಘೋರ್ಪಡೆ, ರಾಜು ಸಾಂಗ್ಲೀಕರ, ಉಮೇಶ ರಾಠೋಡ, ವೆಂಕಟೇಶ ಮುದಗಲ್, ರಫೀಕ್ ತೋರಗಲ್, ಮುದಿಯಪ್ಪ ಮುದೋಳ, ಬಸವರಾಜ ಹೂಗಾರ, ಮುತ್ತಣ್ಣ ಮ್ಯಾಗೇರಿ, ದ್ರಾಕ್ಷಾಯಿಣಿ ಚೋಳಿನ, ಶ್ರೀಧರ ಬಿದರಳ್ಳಿ, ಮುದಿಯಪ್ಪ ಮುಧೋಳ, ಶರಣಪ್ಪ ಬೆಟಗೇರಿ, ಅರಿಹಂತ ಬಾಗಮಾರ, ಅಧಿಕಾರಿಗಳಾದ ಬಿ.ಮಲ್ಲಿಕಾರ್ಜುನ, ಎಂ.ಎಂ. ತೋಟದ, ಪಿ.ಎನ್. ದೊಡ್ಡಮನಿ, ಜಿ.ಎನ್. ಕಾಳೆ, ಶಿವಕುಮಾರ ಇಲಾಳ, ಉಮಾ ಕುರಹಟ್ಟಿ ಸೇರಿ ಇತರರು ಇದ್ದರು.


## ಗ್ರಾಮ ಆಡಳಿತಾಧಿಕಾರಿಗಳಿಗೆ ಹೆಚ್ಚಿದ ಕಾರ್ಯದೊತ್ತಡ । ಇಲಾಖೆಗೆ ಮನವಿ

# ಬೇಡಿಕೆಗಳ ಈಡೇರಿಕೆಗೆ ಇಂದಿನಿಂದ ಮುಷ್ಕರ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ರಾಜ್ಯ ಸಂಘದ ಕಾರ್ಯಕಾರಿಣಿ ಸಭೆಯ ನಿರ್ಣಯದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಸೆ.26ರಿಂದ ಮುಷ್ಕರ ನಡೆಸುವುದಾಗಿ ಶಿರಹಟ್ಟಿ ತಾಲೂಕಾ ಗ್ರಾಮ ಆಡಳಿತ ಅಧಿಕಾರಿಗಳ ಸಂಘದ ವತಿಯಿಂದ ಮಂಗಳವಾರ ತಹಸೀಲ್ದಾರ ಅನಿಲ ಬಡಿಗೇರ ಮೂಲಕ ಸರ್ಕಾರದ ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ತಾಲೂಕಾಧ್ಯಕ್ಷ ನಾಗರಾಜ ಚೋಳಮ್ಮನವರ, ಇಲಾಖೆಯಿಂದ ಅಭಿವೃದ್ಧಿಪಡಿಸಿರುವ ಸುಮಾರು 17 ಮೊಬೈಲ್/ವೆಬ್ ತಂತ್ರಾಂಶಗಳ ಮೂಲಕ ಕರ್ತವ್ಯ ನಿರ್ವಹಿಸಲು ಒತ್ತಡ ಹೇರುತ್ತಿದ್ದು, ಈ ತಂತ್ರಾಂಶಗಳ ನಿರ್ವಹಣೆಗೆ ಅವಶ್ಯಕವಾಗಿರುವ ಮೊಬೈಲ್ ಸಾಧನ, ಲ್ಯಾಪ್‌ಟಾಪ್, ಅದಕ್ಕೆ ಅವಶ್ಯಕವಾಗಿರುವ ಇಂಟರ್‌ನೆಟ್ ಹಾಗೂ ಸ್ಕ್ಯಾನರ್‌ಗಳನ್ನು ಒದಗಿಸದೇ ಕರ್ತವ್ಯ ನಿರ್ವಹಿಸಲು ಒತ್ತಡ ಹೇರುತ್ತಿರುವುದರಿಂದ ಕ್ಷೇತ್ರ ಮಟ್ಟದಲ್ಲಿ ಅಧಿಕ ಒತ್ತಡದೊಂದಿಗೆ ಗ್ರಾಮ ಆಡಳಿತ ಅಧಿಕಾರಿಗಳ ಸಾವು–ನೋವುಗಳು ಸಂಭವಿಸುತ್ತಿದೆ ಎಂದು ಆರೋಪಿಸಿದರು.



ಎಲ್ಲಾ ಮೊಬೈಲ್ ಆ್ಯಪ್‌ಗಳಲ್ಲಿ ಏಕಕಾಲದಲ್ಲಿ ಪ್ರಗತಿ ಸಾಧಿಸಲು ತೀವ್ರ ಒತ್ತಡ ಹೇರುತ್ತಿರುವುದರಿಂದ ಮಾನಸಿಕವಾಗಿ ಹಾಗೂ ದೈಹಿಕವಾಗಿ ವ್ಯತಿರಿಕ್ತ ಪರಿಣಾಮಗಳು ಹೆಚ್ಚಾಗಿರುತ್ತದೆ. ಆದ್ದರಿಂದ ನಮ್ಮೆಲ್ಲ ಬೇಡಿಕೆಗಳು ಈಡೇರುವವರೆಗೆ ಸೆ.26ರಿಂದ ಎಲ್ಲಾ ಬಗೆಯ ಮೊಬೈಲ್ ಹಾಗೂ ವೆಬ್ ಅಪ್ಲಿಕೇಶನ್‌ನ್ನು ಸ್ಥಗಿತಗೊಳಿಸಿ, ಲೇಖನಿ ಸ್ಥಗಿತಗೊಳಿಸುವ ಮೂಲಕ ಅನಿರ್ದಿಷ್ಟಾವಧಿ ಮುಷ್ಕರವನ್ನು ರಾಜ್ಯವ್ಯಾಪಿ ಹಮ್ಮಿಕೊಳ್ಳಲಾಗುವುದು. ಸಮೂಹದ ಬೇಡಿಕೆಗಳನ್ನು ಈಡೇರಿಸಿ ಉತ್ತಮ ಮತ್ತು ಗುಣಮಟ್ಟದ ರೀತಿಯಲ್ಲಿ ಕಾರ್ಯಗಳನ್ನು ನಿರ್ವಹಿಸಲು ಅನುವು ಮಾಡಿಕೊಡಬೇಕೆಂದು ಮನವಿ ಮೂಲಕ ಆಗ್ರಹಿಸಿದರು.

ಪರಶುರಾಮ ತಳವಾರ, ಶರಣಬಸಪ್ಪ ಮೈನಾಳ, ಪ್ರವೀಣ ಬರಡಿ, ಚನ್ನವೀರಸ್ವಾಮಿ ಸಿದ್ದಾಂತಿಮಠ, ಬಿ.ಡಿ. ನಂದಗಾವಿ, ಸಿ.ಸಿ. ನಾಗನೂರ, ಶಂಭುಲಿಂಗಯ್ಯ ಹೆಬ್ಬಾಳಮಠ, ನಾಗಪ್ಪ ರಾಠೋಡ, ಪಿ.ಟಿ. ಬಾರಕೇರ, ಪಿ.ಬಿ. ಗೋರೆಖಾನ, ಲಕ್ಷ್ಮಣ ಲಮಾಣಿ, ಎಸ್.ಎಚ್. ಮುಲ್ಲಾ, ಬಿ.ಎಫ್. ಜಿನಗಿ, ಶೃತಿ ಮಡ್ಡಿ, ರಾಧಾ ದೇಸಾಯಿಪಟ್ಟಿ, ಸಿ.ಪಿ. ತಳಕೇರಿ ಉಪಸ್ಥಿತರಿದ್ದರು.



ಗಜೇಂದ್ರಗಡ ತಾಲೂಕಿನ ಮುಶಿಗೇರಿ ಗ್ರಾಮದಲ್ಲಿ ಲಿಂ.ಪಂಡಿತ ಪುಟ್ಟರಾಜರ ಗವಾಯಿಳವರ 14ನೇ ಪುಣ್ಯಸ್ಮರಣೆ ಅಂಗವಾಗಿ ಪಂಡಿತ ಪುಟ್ಟರಾಜರ ಭಾವಚಿತ್ರ ಮೆರವಣಿಗೆ, ಕುಂಭಮೇಳ ಸೋಮವಾರ ಗ್ರಾಮದ ಪ್ರಮುಖ ಬೀದಿಗಳಲ್ಲಿ ವಾದ್ಯ ವೈಭವಗಳೊಂದಿಗೆ ಜರುಗಿತು.



ನೂತನವಾಗಿ ಗದಗ ಜಿಲ್ಲಾಧಿಕಾರಿಗಳಾಗಿ ಆಗಮಿಸಿರುವ ಗೋವಿಂದ ರೆಡ್ಡಿ ಅವರನ್ನು ಕೆಪಿಸಿಸಿ ಕಾರ್ಮಿಕ ವಿಭಾಗದ ರಾಜ್ಯ ಕಾರ್ಯದರ್ಶಿ ಯೂಸುಫ್ ಡಂಬಳ ನೇತೃತ್ವದಲ್ಲಿ ಭೇಟಿಯಾಗಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಇಮಾಮ್ ಮೊರಬದ, ಸಂತೋಷ, ಉದಯ ಹಾಗೂ ಸಮೀರ್ ಇದ್ದರು.

### ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ಶುದ್ಧ ನೀರು ಘಟಕ ಲೋಕಾರ್ಪಣೆ

# ಶುದ್ಧ ನೀರು ಸೇವನೆಯಿಂದ ರೋಗಗಳು ದೂರ

■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚಿನ ಕಲುಷಿತ ವಾತಾವರಣದಲ್ಲಿ ರೋಗಗಳಿಂದ ಮುಕ್ತವಾಗಬೇಕಾದರೆ ಶುದ್ಧ ನೀರು ಸೇವನೆ ಅತ್ಯವಶ್ಯ. ಅಂತಹ ಶುದ್ಧ ಕುಡಿಯುವ ನೀರನ್ನು ವಿದ್ಯಾರ್ಥಿಗಳಿಗೆ ಕಲ್ಪಿಸಿಕೊಟ್ಟ ಪುಣ್ಯ ಸಭಾಪತಿ ಬಸವರಾಜ ಹೊರಟ್ಟಿಯವರಿಗೆ ಸಲ್ಲುತ್ತದೆ ಎಂದು ನಿವೃತ್ತ ಡಿ.ಡಿ.ಪಿ.ಐ. ಎಮ್.ಎ. ರಡ್ಡೇರ್ ಅಭಿಪ್ರಾಯಪಟ್ಟರು.

ಅವರು ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಸಿದ್ದಲಿಂಗ ನಗರದ ಸರ್ಕಾರಿ ಪ್ರೌಢಶಾಲೆಯಲ್ಲಿ ನಿರ್ಮಾಣಗೊಂಡ ಶುದ್ಧ ನೀರು ಘಟಕ ಹಾಗೂ ಗದಗ ಬೆಟಗೇರಿ ನಗರಸಭೆಯ ನೆರವಿನ ಹೈಮಾಸ್ಟ್ ದೀಪವನ್ನು ಸಾಂಕೇತಿಕವಾಗಿ ಲೋಕಾರ್ಪಣೆಗೊಳಿಸುವ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನ್ನಾಡಿದರು.

ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಹಲವಾರು ದಾನಿಗಳ ನೆರವಿನಿಂದ ಸರ್ಕಾರಿ ಪ್ರೌಢಶಾಲೆ ಒಂದು ಹೊಸ ಕಳೆಯನ್ನು ಕಟ್ಟಿಕೊಂಡು ಜಿಲ್ಲೆಯಲ್ಲಿಯೇ ಮಾದರಿ ಶಾಲೆಯಾಗಿ ಮೂಡಿ ಬಂದಿದೆ. ಶಿಕ್ಷಣ ಇಲಾಖೆಗೆ ಈ ಸಂಗತಿ ಅತ್ಯಂತ ಅಭಿಮಾನ ಹಾಗೂ ಹೆಮ್ಮೆಯದಾಗಿದೆ. ಹೊರಟ್ಟಿಯವರ ಸೇವೆಯನ್ನು ಹಾಗೂ ದಾನಿಗಳ ಉಪಕಾರವನ್ನು ಎಷ್ಟು ಸ್ಮರಿಸಿದರೂ ಕಡಿಮೆಯೇ ಎಂದು ಹೇಳಿದರು.



ಈ ಸಂದರ್ಭದಲ್ಲಿ ಗದಗ ಶಹರದ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ, ನಗರಸಭೆ ಸದಸ್ಯೆ ವಿದ್ಯಾವತಿ ಗಡಗಿ, ನಿವೃತ್ತ ಮುಖ್ಯೋಪಾಧ್ಯಾಯ ಎಸ್.ಎಂ. ಅಗಡಿ ಸೇರಿದಂತೆ ಅಧ್ಯಕ್ಷತೆ ವಹಿಸಿದ್ದ ಪ್ರಭಾರಿ ಮುಖ್ಯೋಪಾಧ್ಯಾಯರಾದ ಜಯಲಕ್ಷ್ಮೀ ಅಣ್ಣಿಗೇರಿಯವರು ಮಾತನಾಡಿದರು.

ಈ ಸಂದರ್ಭದಲ್ಲಿ ಸಾಮಾಜಿಕ ಕಾರ್ಯಕರ್ತ ಅಮರೇಶ ಗಡಗಿ, ತೋಟಗಾರಿಕೆ ಇಲಾಖೆ ಅಧಿಕಾರಿ ಶಂಭುಲಿಂಗ ನೆಗಳೂರ, ಸುನೀಲ ವೆರ್ಣೇಕರ್, ಸಂತೋಷ ಪಾಟೀಲ, ಮಲ್ಲಪ್ಪ ಜಿನಗಿ, ಮೈಲಾರಪ್ಪ ಹುಯಿಲಗೋಳ, ಮಂಜುನಾಥ ಹುಡೇದ, ರೇಖಾ ಬಾವಿ, ಮಾರುತಿ ಚಲವಾದಿ, ರೇಣುಕಾ ರೋಣದ, ಶಿವಶಿಂಪರ, ಬಾಕಳೆ, ಶಿಕ್ಷಕರಾದ ಸುಭಾಸ ನಿಡಸನೂರ, ಎ.ಎಮ್. ಸಂಗನಾಳ, ಶಂಕ್ರಮ್ಮ ಆರ್. ಹಣಮಗೌಡ್ರು, ಎಂ.ಐ. ಶಿವನಗೌಡ್ರು, ಮಂಜುಳಾ ಪಿ.ಸಾಮ್ರಾಣಿ, ಸುಮಂಗಲ ಎಂ.ಪತ್ತಾರ್, ಶಾರದಾ ಬಾಣದ, ಶೋಭಾ ಎಸ್. ಗಾಳಿ, ರಮೇಶ್ ಬಸರಿ, ಸಾವಿತ್ರಿ ಎ.ಗದ್ದನಕೇರಿ, ಎನ್.ಆರ್. ಶಿರೋಳ್, ಸಬಿಯಾ ಯು. ಕುಷ್ಟಗಿ, ಗಂಗಾ ಎಂ.ಅಳವಂಡಿ, ಮಂಜುಳಾ ಟಿ, ಪದ್ಮಾ ವಿ.ದಾಸರ್, ಲಕ್ಷ್ಮಮ್ಮ ಮಾಳೋತ್ತರ್ ಮುಂತಾದವರು ಉಪಸ್ಥಿತರಿದ್ದರು.

ಕಾರ್ಯಕ್ರಮದ ನಿರೂಪಣೆಯನ್ನು ಸಂಜೀವಿನಿ ಕೂಲಗುಡಿ ನೆರವೇರಿಸಿದರು. ವಂದನಾರ್ಪಣೆಯನ್ನು ಶಶಿಕಲಾ ಬಿ.ಗುಳೇದವರ ಮಾಡಿದರು.

ಶಾಲೆಯ ದತ್ತು ಉಸ್ತುವಾರಿಗಳಾದ ಡಾ.ಬಸವರಾಜ ಧಾರವಾಡ ಮಾತನಾಡಿ, ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಮೇಲೆ ಈ ಶಾಲೆಯಲ್ಲಿ ಹಲವಾರು ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿಕೊಡಲಾಗಿದೆ. ಶೀಘ್ರದಲ್ಲಿಯೇ ಬೃಹತ್ ಕಾರ್ಯಕ್ರಮ ಆಯೋಜಿಸಿ ಪೂರ್ಣಗೊಂಡ ಎಲ್ಲ ಕಾಮಗಾರಿಗಳನ್ನು ಲೋಕಾರ್ಪಣೆಗೊಳಿಸಲಾಗುವುದು ಎಂದು ಹೇಳಿದರು.

# ಸಹಾಯವಾಣಿ ಆರಂಭ




■ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮಾಹಿತಿ ಹಾಗೂ ಕುಂದುಕೊರತೆಗಳ ನಿವಾರಣೆಗೆ ಹೊಸ ಸಹಾಯವಾಣಿ ಸಂಖ್ಯೆ 8277506000 ಆರಂಭಿಸಲಾಗಿದೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ಯೋಜನೆಗಳಡಿ ಸಾರ್ವಜನಿಕರಿಗೆ ಬಂದೊದಗಬಹುದಾದ ಗೊಂದಲ ಹಾಗೂ ಕ್ಷೇತ್ರ ಮಟ್ಟದಲ್ಲಿ ತಲೆದೂರುವ ಸಮಸ್ಯೆಗಳಿಗೆ ಶೀಘ್ರದಲ್ಲಿ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಇಲಾಖೆಯಡಿ ಅನುಷ್ಠಾನಿಸುವ ಎಲ್ಲಾ ಯೋಜನೆಗೆ ಸಂಬಂಧಿಸಿದಂತೆ ಏಕೀಕೃತ ಸಹಾಯವಾಣಿಯನ್ನು ಪ್ರಾರಂಭಿಸಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡಿಸಿಕೊಳ್ಳುವಂತೆ ಗದಗ ಜಿಲ್ಲಾ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

# ಶ್ರೀಮತಿ ಶುಭಾಗೆ ಪಿಎಚ್‌ಡಿ ಪದವಿ ಪ್ರದಾನ




■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕುಕನೂರು ತಾಲೂಕಿನ ತಳಬಾಳದ ವಸತಿಯುಕ್ತ ಮಾದರಿ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಭಾರಿ ಪ್ರಾಂಶುಪಾಲರಾದ ಶ್ರೀಮತಿ ಶುಭಾ ಇವರಿಗೆ ಈಚೆಗೆ ಧಾರವಾಡದ ಕರ್ನಾಟಕ ವಿಶ್ವವಿಸ್ಯಾಲಯದಲ್ಲಿ ನಡೆದ ಘಟಿಕೋತ್ಸವದಲ್ಲಿ ಪಿಎಚ್‌ಡಿ ಪದವಿ ಪ್ರದಾನ ಮಾಡಲಾಯಿತು.

ಶ್ರೀಮತಿ ಶುಭಾ ಇತಿಹಾಸ ವಿಭಾಗದ ಸಹಾಯಕ ಪ್ರಾಧ್ಯಾಪಕರಾಗಿದ್ದು, ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ಇತಿಹಾಸ ಮತ್ತು ಪ್ರಾಚ್ಯಶಾಸ್ತ್ರ ವಿಭಾಗದ ನಿವೃತ್ತ ಪ್ರಾಧ್ಯಾಪಕ ಡಾ.ಐ.ಕೆ. ಪತ್ತಾರ ಮಾರ್ಗದರ್ಶನದಲ್ಲಿ ಸಿದ್ಧಪಡಿಸಿದ "ಮೀರ್ ಉಸ್ಮಾನ್ ಅಲೀಖಾನ್‌ನ ಜೀವನ ಮತ್ತು ಕೊಡುಗೆಗಳು" ಎಂಬ ಮಹಾಪ್ರಬಂಧಕ್ಕೆ ಡಾಕ್ಟರೇಟ್ ಪದವಿ ನೀಡಿ ಗೌರವಿಸಿದೆ. ಉನ್ನತ ಶಿಕ್ಷಣ ಸಚಿವ ಹಾಗೂ ಸಮಕುಲಾಧಿಪತಿ ಡಾ.ಎಂ.ಸಿ.ಸುಧಾಕರ ಪಿಎಚ್‌ಡಿ ಪದವಿ ಪ್ರಧಾನ ಮಾಡಿದರು. ಈ ಸಂದರ್ಭದಲ್ಲಿ ಧಾರವಾಡ ಕರ್ನಾಟಕ ವಿವಿಯ ಉಪಕುಲಪತಿ, ವಿವಿಧ ವಿಭಾಗಗಳ ಬೋಧಕ ವೃಂದ, ಗಣ್ಯಮಾನ್ಯರು ಉಪಸ್ಥಿತರಿದ್ದರು.

### ಸ್ವಚ್ಛತಾ ಪೌರಕಾರ್ಮಿಕರಿಗೆ ಕ್ರೀಡಾಕೂಟ

# ವಿಜೇತರಿಗೆ ಬಹುಮಾನ ವಿತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಮುನ್ಸಿಪಲ್ ಹೈಸ್ಕೂಲ್ ಮೈದಾನದಲ್ಲಿ ಪೌರಕಾರ್ಮಿಕರಿಗೆ ಕ್ರೀಡಾಕೂಟ ಆಯೋಜಿಸಲಾಗಿತ್ತು. ನಗರಸಭೆ ಪೌರಾಯುಕ್ತ ರಮೇಶ ಪೋತದಾರ್, ಪರಿಸರ ಅಭಿಯಂತರ ಆನಂದ ಬದಿ, ಹಿರಿಯ ಆರೋಗ್ಯ ನಿರೀಕ್ಷಕ ಎಂ.ಎಂ. ಮಕಾನದಾರ, ಪೌರ ಕಾರ್ಮಿಕ ನೌಕರರ ಜಿಲ್ಲಾಧ್ಯಕ್ಷ ಹೇಮೇಶ್ ಯಟ್ಟಿ, ಗೌರವಾಧ್ಯಕ್ಷ ನಾಗರಾಜ್ ಬಳ್ಳಾರಿ, ಜಿಲ್ಲಾ ಉಪಾಧ್ಯಕ್ಷ ಕೆಂಚಪ್ಪ ಪೂಜಾರ್, ಶಾಖಾ ಸಂಘದ ಅಧ್ಯಕ್ಷ ಚಂದ್ರು ಹಾದಿಮನಿ, ಸಣ್ಣಪ್ಪ ಬೋಳಮ್ಮನವರ್, ಪಂಚಾಕ್ಷರಿ ದೊಡ್ಡಮನಿ, ವಾಸು ಹಾದಿಮನಿ, ಮೃತ್ಯುಂಜಯ



ದೊಡಮನಿ, ಹನುಮಂತ ದೊಡ್ಡಮನಿ, ಮುತ್ತು ಚಲವಾದಿ, ಪರಶುರಾಮ್ ಪೂಜಾರ್, ಅರ್ಜುನ್ ದೊಡ್ಡಮನಿ, ವಿಶ್ವನಾಥ ದೊಡ್ಡಮನಿ ಹಾಗೂ ಪೌರಕಾರ್ಮಿಕರ ಉಪಸ್ಥಿತಿಯಲ್ಲಿ ಕ್ರೀಡಾಕೂಟ ಜರುಗಿತು.

ಪುರುಷರ ವಿಭಾಗ : 100 ಮೀ ಓಟ-ಸಾಗರ ದೊಡ್ಡಮನಿ ಪ್ರಥಮ, ಷಣ್ಮುಖಪ್ಪ ಸೋಂಪೂರ ದ್ವಿತೀಯ, ರಾಜು ಭರಮ್ಮನ್ನವರ ತೃತೀಯ, ಚಕ್ರ ಎಸೆತ-ಪರಶುರಾಮ ಗುಡಿಮನಿ ಪ್ರಥಮ, ನಾಗರಾಜ ಬಿಳಿಎಲಿ ದ್ವಿತೀಯ, ಪರಶುರಾಮ ಸಂಗಾಪೂರ ತೃತೀಯ, ಗುಂಡು ಎಸೆತ-ಪರಶುರಾಮ ಗುಡಿಮನಿ ಪ್ರಥಮ, ಸಂತೋಷ ಹಾದಿಮನಿ-ದ್ವಿತೀಯ, ಮಂಜುನಾಥ ಕಡಗೂರ-ತೃತೀಯ, ಹಗ್ಗಜಗ್ಗಾಟ-ಚಂದ್ರು ಹಾದಿಮನಿ, ಚಿದಾನಂದ ಮುಳಗುಂದ, ರಾಘು ಹೊಸಳ್ಳಿ, ಸಾಗರ ದೊಡ್ಡಮನಿ, ರಮೇಶ ಕಡಬೂರ, ಲಕ್ಕಪ್ಪ ದೊಡ್ಡಮನಿ, ಬುಡ್ಡಸಾಗ ಅರಳಿಗಿಡದ ತಂಡ ಪ್ರಥಮ, ಕಬಡ್ಡಿ-ವೆಂಕಟೇಶ ಬಳ್ಳಾರಿ ನಾಯಕ, ಚಿದಾನಂದ ಮುಳಗುಂದ, ಮುತ್ತು ದೊಡ್ಡಮನಿ, ಮಂಜುನಾಥ ಕಡಗೂರ, ನಾಗು ಬಿಳೆಯಲಿ, ಲಕ್ಷ್ಮಪ್ಪ ದೊಡ್ಡಮನಿ, ರಾಘು ಹೊಸಳ್ಳಿ, ಸಂತೋಷ ಹಾದಿಮನಿ ಜೈ ಭೀಮ ತಂಡ ಪ್ರಥಮ, ಕೃಷ್ಣಾ ಪರಾಪೂರ, ರಾಜು, ಸಾಗರ, ಮುತ್ತು, ಯಲ್ಲಪ್ಪ, ಆಕಾಶ, ಬಾಲು ಟೈಗರ್ ತಂಡ ದ್ವಿತೀಯ, ಕ್ರಿಕೆಟ್-ಲೋಡರ್ಸ್ ತಂಡ ಪ್ರಥಮ ಸ್ಥಾನ-ಮಂಜು ಕಡಬೂರ ನಾಯಕ, ಸಾಗರ ದೊಡಮನಿ, ಸಣ್ಣ ಗೂಳಮ್ಮನವರ, ಆಂಜನೇಯ ಪೂಜಾರ, ಷಣ್ಮುಖ ಬೋಳಮ್ಮನವರ, ರಾಘು ಹೊಸಳ್ಳಿ, ಸುರೇಶ, ವಿಠ್ಠಲ ಪರಾಪೂರ, ಲಕ್ಷ್ಮಣ, ರಾಜು ಭರಮ್ಮನವರ, ಪಂಚಾಕ್ಷರಿ ದೊಡ್ಡಮನಿ,.

ಮಹಿಳೆಯರ ವಿಭಾಗ: 100 ಮೀ ಓಟ-ದುರಗವ್ವ ದೊಡ್ಡಮನಿ ಪ್ರಥಮ, ಯಲ್ಲಪ್ಪ ಸೊರಟೂರ ದ್ವಿತೀಯ, ಕನಕವ್ವ ದೊಡ್ಡಮನಿ ತೃತೀಯ, ಲಿಂಬು ಸ್ಪೂನ್-ರೇಣವ್ವ ಗೌಡರ ಪ್ರಥಮ, ಪಾರವ್ವ ಮಾದರ ದ್ವಿತೀಯ, ಸುಮಂಗಲಾ ಮುದನಾಳ ತೃತೀಯ, ಹಗ್ಗ ಜಗ್ಗಾಟ-ಶೋಭಾ ಭರಮಣ್ಣವರ, ನೀಲವ್ವ ಸೋಂಪೂರ, ಗಂಗವ್ವ ದೊಡ್ಡಮನಿ, ಸುಮಂಗಲಾ ಮುದನಾಳ, ದುರಗವ್ವ ದೊಡ್ಡಮನಿ ಬಹುಮಾನ ಪಡೆದುಕೊಂಡರು.

# 'ಅಸ್ಮಾಕಂ ಸಂಸ್ಕೃತಂ' ಸರಣಿ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಸಂಸ್ಕೃತ ಪಾಠಶಾಲೆ ಹಾಗೂ ಕಣವಿ ಹೊಸೂರ ಗ್ರಾಮಗಳ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಸಂಯುಕ್ತಾಶ್ರಯದಲ್ಲಿ ಕಣವಿ ಗ್ರಾಮದ ಶ್ರೀ ಹನುಮಂತದೇವರ ದೇವಸ್ಥಾನ ಹಾಗೂ ಶ್ರೀ ಕೆ.ಜಿ.ವ್ಹಿ.ಎಸ್. ಶಾಲೆಗಳಲ್ಲಿ 'ಅಸ್ಮಾಕಂ ಸಂಸ್ಕೃತಂ' ಸರಣಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಸಂಸ್ಕೃತ ವಿಶ್ವವಿದ್ಯಾಲಯದ ಧಾರವಾಡ ವಲಯ ವಿಷಯ ಪರಿವೀಕ್ಷಕರಾದ ವಿದ್ವಾನ್ ಗಣಪತಿ ಎಸ್.ಗಾಂವಕರ ಸರಣಿ




ಕಾರ್ಯಕ್ರಮ ಕುರಿತು ಉಪನ್ಯಾಸ ನೀಡುತ್ತಾ, ಸಂಸ್ಕೃತ ಭಾಷೆಯ ಮಹತ್ವ ಹಾಗೂ ಡಾ. ಪಂ.ಪುಟ್ಟರಾಜ ಕವಿ ಗವಾಯಿಗಳವರ ಸಂಸ್ಕೃತ ಪಾಂಡಿತ್ಯವನ್ನು ಕುರಿತು ಮಕ್ಕಳಿಗೆ ಮನಮುಟ್ಟುವಂತೆ ಉಪನ್ಯಾಸ ನೀಡಿದರು.

ಸಂಸ್ಕೃತ ಪಾಠಶಾಲೆಯ ಸಂಸ್ಕೃತ ಶಿಕ್ಷಕರು ಹಾಗೂ ಗಡಿನಾಡ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ವೇ.ಮೂ. ಶಿವಚಲಕುಮಾರ ಎಸ್.ಸಾಲಿಮಠ, ಅಧ್ಯಕ್ಷತೆ ವಹಿಸಿದ್ದ ಎನ್.ಎಸ್. ಆಲೂರ ಮಾತನಾಡಿದರು.

ಶ್ರೀ ಹನುಮಂತ ದೇವರ ದೇವಸ್ಥಾನದಿಂದ ಕೆ.ಜಿ.ವ್ಹಿ. ಎಸ್. ಶಾಲೆಯವರೆಗೆ ಸಂಸ್ಕೃತ ಶೋಭಾ ಯಾತ್ರೆ, ಜಾಥಾವನ್ನು ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದಲ್ಲಿ ದೇವಸ್ಥಾನ ಟ್ರಸ್ಟ್ ಕಮಿಟಿಯ ಕೆ.ಎಸ್. ಕುರ್ತಕೋಟಿ, ಅಣ್ಣಿಗೇರಿ ಗುರುಗಳ ಆಶ್ರಮದ ವ್ಯವಸ್ಥಾಪಕ ಶಂಕರಪ್ಪ ಅಣ್ಣಿಗೇರಿ, ಕೆ.ಜಿ.ವ್ಹಿ.ಎಸ್. ಶಾಲೆಯ ಮುಖ್ಯಸ್ಥರಾದ ನಿಜಗುಣಶಿವಯೋಗಿ ಎಸ್.ಆಲೂರ, ದೇಶಪಾಂಡೆ ಫೌಂಡೇಶನ್ ಎಸ್.ಐ.ವಿ ಶಾಖೆಯ ಗದಗ ಮುಖ್ಯಸ್ಥರಾದ ದರ್ಶನಾ ಸುಲಾಖೆಯವರು, ಶಾಲಾ ಶಿಕ್ಷಕ ಅರುಣ ಕಲ್ಲನಗೌಡ್ರ, ಯಲ್ಲಪ್ಪ ಕಲ್ಯಾಣಿಯವರು, ಜಿ.ಟಿ. ಸಂಸ್ಕೃತ ಪಾಠಶಾಲೆಯ ಮುಖ್ಯೋಪಾಧ್ಯಾಯ ಎಸ್.ಎನ್. ಶಿಂಪಿಗೇರ, ಎಸ್. ಎಸ್. ನೀಲಗುಂದ, ವಿಜಯಲಕ್ಷ್ಮೀ ಪಟ್ಟಣಶೆಟ್ಟಿ, ಮಹಾಂತೇಶ, ಸುರೇಶ, ಕಾಶೀ ಪಾಠಶಾಲೆಯ ಮುಖ್ಯೋಪಾಧ್ಯಾಯ ವೇ.ಮೂ. ಗುರುಸಿದ್ಧಯ್ಯನವರು ಹಿರೇಮಠ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಶಾಲಾ ಮುಖ್ಯೋಪಾಧ್ಯಾಯೆ ತೇಜಸ್ವಿನಿ ಕುರ್ತಕೋಟಿ ಕಾರ್ಯಕ್ರಮ ನಿರೂಪಿಸಿದರು. ಶಾಲಾ ವಿದ್ಯಾರ್ಥಿನಿಯರು ಪ್ರಾರ್ಥಿಸಿದರು.

### ಕೈಕೊಟ್ಟ ಬಿಎಸ್‌ಎನ್‌ಎಲ್ ಸರ್ವರ್ । ಗ್ರಾಹಕರ ಪರದಾಟ

# ಸ್ಥಳೀಯ ಸಿಬ್ಬಂದಿ ಮೇಲೆ ಅಸಮಾಧಾನ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದಲ್ಲಿ ಸೋಮವಾರ ಸಂಜೆ 5.30ರಿಂದ ಬಿಎಸ್‌ಎನ್‌ಎಲ್ ನೆಟ್‌ವರ್ಕ್ ಕಡಿತಗೊಂಡ ಪರಿಣಾಮ ಗ್ರಾಹಕರು ಪರದಾಡಿ, ಸ್ಥಳೀಯ ಶಾಖೆ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ ಘಟನೆ ಮಂಗಳವಾರ ನಡೆಯಿತು.

ಜಿಲ್ಲೆಯ ವಾಣಿಜ್ಯ ಕೇಂದ್ರವಾಗಿರುವ ಪಟ್ಟಣದಲ್ಲಿ ಸೋಮವಾರ ಸಂಜೆಯಿಂದ ಬಿಎಸ್‌ಎನ್‌ಎಲ್ ನೆಟ್‌ವರ್ಕ್ ಕಡಿತಗೊಂಡ ಪರಿಣಾಮ ಗ್ರಾಹಕರು ಕರೆ, ಎಸ್‌ಎಂಎಸ್ ಹಾಗೂ ಇಂಟರ್‌ನೆಟ್ ಸೇವೆಯಿಂದ ವಂಚಿತವಾಗಿದ್ದಾರೆ. ಏಕಾಏಕಿ ನೆಟ್‌ವರ್ಕ್ ಕಡಿತದಿಂದ ಗಲಿಬಿಲಿಗೊಂಡ ಗ್ರಾಹಕರು ಮಂಗಳವಾರ ಬೆಳಿಗ್ಗೆಯಿಂದಲೇ ಪಟ್ಟಣದ ಜೋಡು ರಸ್ತೆಯಲ್ಲಿನ ಬಿಎಸ್‌ಎನ್‌ಎಲ್ ಕಚೇರಿಗೆ ಆಗಮಿಸಿ ಸಮಸ್ಯೆಯ ಕುರಿತು ವಿಚಾರಿಸಲು ಮುಂದಾಗಿದ್ದಾರೆ. ಆದರೆ ಸ್ಥಳೀಯ ಸಿಬ್ಬಂದಿ ಹಾಗೂ ಶಾಖಾ ವ್ಯವಸ್ಥಾಪಕರು ಸರಿಯಾಗಿ ಸ್ಪಂದಿಸುತ್ತಿಲ್ಲ, ಹುಬ್ಬಳ್ಳಿಯಿಂದ ಅಧಿಕಾರಿಗಳು ಬಂದು ಸರಿ ಮಾಡುತ್ತಾರೆ ಎಂದು ಹಾರಿಕೆಯ ಉತ್ತರ ನೀಡುತ್ತಾರೆ ಎಂದು ಆರೋಪಿಸಿದರು.

ಪಟ್ಟಣದಲ್ಲಿ ನೂರಾರು ಗ್ರಾಹಕರು ಅದರಲ್ಲೂ ಗಣ್ಯ ವರ್ತಕರು, ಇಂಟರ್‌ನೆಟ್ ಸೆಂಟರ್ ಸೇರಿ ನೂರಾರು ಗ್ರಾಹಕರು ಬಿಎಸ್‌ಎನ್‌ಎಲ್ ಸೇವೆಯನ್ನೇ ಬಳಸುತ್ತಿದ್ದಾರೆ. ಆದರೆ ಕಳೆದ 12 ಗಂಟೆಗಳ ಕಾಲ ನೆಟ್‌ವರ್ಕ್ ಸಮಸ್ಯೆಯಾದರೂ ಸಹ ದುರಸ್ತಿಗೆ ಮುಂದಾದಂತಿಲ್ಲ. ಪಟ್ಟಣದಲ್ಲಿ ಬಿಎಸ್‌ಎನ್‌ಎಲ್ ಕಚೇರಿಗೆ ದೂರು ನೀಡಲು ಒಂದು ಸಂಖ್ಯೆಯೂ ಸಹ ಇಲ್ಲ. ಪರಿಣಾಮ ಖಾಸಗಿ ನೆಟವರ್ಕ್‌ಗಳ ಸೇವೆಗೆ ಪೈಪೋಟಿ ನೀಡಬೇಕಾದ ದಿನಗಳಲ್ಲಿ ಬಿಎಸ್‌ಎನ್‌ಎಲ್ ಈ ರೀತಿಯಾಗಿ ಸೇವೆ ನೀಡುತ್ತಿರುವುದು ವಿಪರ್ಯಾಸ. ನಮ್ಮ ನೆಟವರ್ಕ್ ಎಂದು ನಾವು ಬಿಎಸ್‌ಎನ್‌ಎಲ್ ಬಳಸುತ್ತಿದ್ದೇವೆ. ಆದರೆ ಸೇವೆ ನೀಡುತ್ತಿರುವ ಸ್ಥಳೀಯ ಶಾಖೆಯವರು ಗ್ರಾಹಕರಿಗೆ ಸರಿಯಾಗಿ ಸ್ಪಂದಿಸದಿರುವುದು ವಿಪರ್ಯಾಸ ಎಂದು ಅಸಮಾಧಾನ ವ್ಯಕ್ತಡಿಸಿದರು.

ಸರ್ಕಾರಿ ಆಸ್ಪತ್ರೆಯ ಸುರಕ್ಷಾ ಸಮಿತಿ ಸದಸ್ಯ ಶರಣಪ್ಪ ಚಳಗೇರಿ, ಪುರಸಭೆ ಮಾಜಿ ಸದಸ್ಯ ವಿಜಯ ರಾಯಬಾಗಿ, ಹನಮಂತಸಾ ಮೇಘರಾಜ, ಶಾಮೀದ್ ದಿಂಡವಾಡ, ನಿಂಗಪ್ಪ ಮಾಸ್ತಿ, ಅರಿಹಂತ ವಂದಕುದರಿ, ಅರುಣ ನೆಲ್ಲರು ಸೇರಿ ಇತರರು ಇದ್ದರು.

ಪಟ್ಟಣದಲ್ಲಿ ಬಿಎಸ್‌ಎನ್‌ಎಲ್ ಸರ್ವರ್ ಸಮಸ್ಯೆ ಕುರಿತು ಕಚೇರಿಗೆ ಬಂದ ಗದಗ ಡಿವಿಜನಲ್ ಅಭಿಯಂತರ ಎಚ್.ಎಫ್. ಶಿರಹಟ್ಟಿ ಮಾತನಾಡಿ, ನಿನ್ನೆ ರಾತ್ರಿ 12 ಗಂಟೆವರೆಗೆ ನೆಟವರ್ಕ್ ಸಮಸ್ಯೆ ಕುರಿತು ಪರಿಶೀಲಿಸಲಾಗಿದೆ. ಬೆಳಿಗ್ಗೆ 6 ಗಂಟೆಗೆ ನಮ್ಮ ಸಿಬ್ಬಂದಿಯನ್ನು ಕಳುಹಿಸಿದ್ದು, ಸಮಸ್ಯೆ ಇರುವುದರಿಂದ ಹುಬ್ಬಳ್ಳಿ, ಗದಗದಿಂದ ತಂಡ ಆಗಮಿಸುತ್ತಿದೆ. ಶೀಘ್ರವೇ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲಾಗುವುದು ಎಂದ ಬಳಿಕ ಗ್ರಾಹಕರು ಬಿಎಸ್‌ಎನ್‌ಎಲ್ ಕಚೇರಿಯಿಂದ ಹೊರ ನಡೆದರು.

### ಸುವಿಧಾ ಪತ್ತಿನ ಸೌಹಾರ್ದ ಸಹಕಾರಿ ಸಂಘದ 10ನೇ ವಾರ್ಷಿಕ ಸಭೆ

# ಸುವಿಧಾ ಸಂಘ ಪ್ರಗತಿಯಲ್ಲಿ ಮುನ್ನಡೆ

■ವಿಜಯಸಾಕ್ಷಿ ಸುದ್ದಿ, ಗದಗ

ಸುವಿಧಾ ಪತ್ತಿನ ಸೌಹಾರ್ದ ಸಹಕಾರಿ ಸಂಘವು ಪ್ರಸಕ್ತ ಸಾಲಿನಲ್ಲಿ 5 ಲಕ್ಷ 29 ಸಾವಿರ ರೂ.ಗಳ ಲಾಭದೊಂದಿಗೆ ಪ್ರಗತಿಯಲ್ಲಿ ಮುನ್ನಡೆದಿದ್ದು, ಶೇರುದಾರರಿಗೆ ಶೇ. 10ರಷ್ಟು ಡಿವ್ಹಿಡೆಂಡ್ ವಿತರಿಸಲಾಗುವದು ಎಂದು ಸಂಘದ ಅಧ್ಯಕ್ಷ ಬಿ.ವ್ಹಿ. ಸಂಕನೂರ ಹೇಳಿದರು.

ಅವರು ಸಂಘದ ಸಭಾಂಗಣದಲ್ಲಿ ಏರ್ಪಡಿಸಿದ್ದ ಸಂಘದ 10ನೇ ವಾರ್ಷಿಕ ಸರ್ವ ಸಾಧಾರಣ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಂಘಕ್ಕೆ 906 ಸದಸ್ಯರಿದ್ದು, ಗ್ರಾಹಕರು ಸಂಘದಲ್ಲಿ ವಿಶ್ವಾಸದೊಂದಿಗೆ ವ್ಯವಹಾರ ನಡೆಸುತ್ತಿದ್ದಾರೆ. ಶೇರು, ಡಿಪಾಸಿಟ್ ಹಾಗೂ ಇತರೆ ಹಣಕಾಸು ವ್ಯವಹರಿಸುತ್ತ ಸಂಘದ ಆರ್ಥಿಕ ಪ್ರಗತಿಗೆ ಸಹಕಾರ ನೀಡುತ್ತಿದ್ದಾರೆ. ಎಲ್ಲ ನಿರ್ದೇಶಕರು ಮಾರ್ಗದರ್ಶನ ನೀಡಿ ಸರಿಯಾಗಿ ಮರುಪಾವತಿ ಮಾಡುವವರಿಗೆ ಸಾಲ ಕೊಡಿಸಲು ಹಾಗೂ ಸಾಲ ವಸೂಲಾತಿಗೆ ಸಹಕರಿಸುತ್ತಿದ್ದಾರೆ ಎಂದರು.




ಬರಲಿರುವ ದಿನಗಳಲ್ಲಿ ಸದಸ್ಯರ ಸಂಖ್ಯೆ ಹಾಗೂ ಎಫ್.ಡಿ. ಹೆಚ್ಚಿಸಿ ಸಂಘದ ವ್ಯವಹಾರವನ್ನು ಇನ್ನಷ್ಟು ಹೆಚ್ಚಿಸುವ ಮೂಲಕ ಆರ್ಥಿಕ ಬಲವರ್ಧನೆಗೆ ಅಗತ್ಯ ಕ್ರಮ ಜರುಗಿಸಲಾಗುವದು ಎಂದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಸಾಮಾಜಿಕ ಕಾರ್ಯಕರ್ತ ಶಾಂತಯ್ಯ ಮುತ್ತಿನಪೆಂಡಿಮಠ ಮಾತನಾಡಿ, ಕಣಗಿನಹಾಳದ ಸಿದ್ಧನಗೌಡ ಸಣ್ಣರಾಮನಗೌಡ ಪಾಟೀಲ ಅ ವರು ಸಹಕಾರಿ ಪಿತಾಮಹ ಎಂಬ ಹೆಗ್ಗಳಿಕೆ ಪಾತ್ರರಾಗಿದ್ದಾರೆ. ದೇಶದಲ್ಲಿಯೇ ಪ್ರಪ್ರಥಮ ಸಹಕಾರಿ ಸಂಘ ಕಣಗಿನಹಾಳದಲ್ಲಿ ಸ್ಥಾಪನೆಗೊಂಡಿದ್ದು ಎಲ್ಲರಿಗೂ ತಿಳಿದ ಸಂಗತಿ. ಇಂತಹ ಸಹಕಾರಿ ಪರಿಸರದಲ್ಲಿ ಸಹಕಾರಿ ಸಂಘಗಳು ಗ್ರಾಹಕರಿಗೆ ಉತ್ತಮ ಸೇವೆ ನೀಡಿ ಗ್ರಾಹಕರು ಸ್ವಯಂ ಉದ್ಯೋಗ ಕೈಗೊಂಡು ಆರ್ಥಿಕವಾಗಿ ಬಲಗೊಳ್ಳಲು ಸಹಕರಿಸಲಿ ಎಂದರು.

ಸಹಕಾರಿ ರಂಗದ ಭೀಷ್ಮ, ಸಹಕಾರಿ ಕ್ಷೇತ್ರದ ಪಿತಾಮಹ ಎಂದೇ ಖ್ಯಾತರಾಗಿರುವ ಸಿದ್ಧನಗೌಡ ಪಾಟೀಲರ ಪುತ್ಥಳಿಯನ್ನು ಗದುಗಿನ ಪ್ರಮುಖ ಸ್ಥಳದಲ್ಲಿ ಸ್ಥಾಪಿಸಲು ಜಿಲ್ಲಾಡಳಿತ, ಸರಕಾರ ಅಗತ್ಯ ಕ್ರಮ ಕೈಗೊಳ್ಳಬೇಕು ಇದಕ್ಕೆ ಗದಗ ಜಿಲ್ಲೆಯ ಎಲ್ಲ ಸಹಕಾರಿ ಸಂಘ ಸಂಸ್ಥೆಗಳು ಒತ್ತಾಯ ಮಾಡಬೇಕೆಂದು ಹೇಳಿ ಸುವಿಧಾ ಸಂಘದ ಪ್ರಗತಿಯನ್ನು ಶ್ಲಾಘಿಸಿದರು.

ಸಹಕಾರ ಸಂಘದೊಂದಿಗೆ ಉತ್ತಮ ಬಾಂಧವ್ಯ ಹೊಂದಿದ ಗ್ರಾಹಕರನ್ನು ಗೌರವಿಸಲಾಯಿತು. ಮುಖ್ಯ ಕಾರ್ಯನಿರ್ವಾಹಕ ರವಿ ಹೊಸೂರ ಅವರು ಅಡಾವೆ ಪತ್ರಿಯನ್ನು ಸಾದರಪಡಿಸಿದರು. ವೇದಿಕೆಯ ಮೇಲೆ ಗಣ್ಯರಾದ ಹಿರೇಮಠ, ನಿರ್ದೇಶಕರಾದ ಡಿ.ಕೆ. ಅಬ್ಬಿಗೇರಿ, ಶಾಂತಾ ಸಂಕನೂರ, ಎಸ್.ಎಸ್. ಯಳವತ್ತಿ, ಪದ್ಮಾವತಿ ಜಾಡರ, ರೇಖಾ ಆಸಂಗಿ, ಕೆ.ನಿಖಿಲ್‌ರಡ್ಡಿ ಉಪಸ್ಥಿತರಿದ್ದರು.

ಪದ್ಮಾವತಿ ಜಾಡರ ಪ್ರಾರ್ಥಿಸಿದರು, ಎಂ.ವೈ. ಹೊಸೂರ ಸ್ವಾಗತಿಸಿದರು. ಅಶೋಕ ಅಂಗಡಿ ನಿರೂಪಿಸಿದರು. ನಿರ್ಮಲಾ ವಂದಿಸಿದರು. ಸಭೆಯಲ್ಲಿ ಶಿವಪ್ಪ ಗೋಣೆಪ್ಪನವರ, ಉಮೇಶ ತಿಮ್ಮನಗೌಡ್ರ, ಮೈಲಾರಪ್ಪ ಸೋಮಗೊಂಡ ಸೇರಿದಂತೆ ಅನೇಕ ಗಣ್ಯರು ಪಾಲ್ಗೊಂಡು ಸಲಹೆ-ಸೂಚನೆ ನೀಡಿದರು.

ಸಂಘದ ಉಪಾಧ್ಯಕ್ಷ ರಾಮಪ್ಪ ಅಗಸಿಮನಿ ಸಂಘ ನಡೆದು ಬಂದ ದಾರಿ, ಪ್ರಸ್ತುತ ಪ್ರಗತಿಯನ್ನು ವಿವರಿಸಿ ವರದಿ ವರ್ಷದ ಅಂತ್ಯಕ್ಕೆ ನಮ್ಮ ಸಂಘದ ದುಡಿಯುವ ಬಂಡವಾಳ, ಶೇರು, ಠೇವು, ನಿಧಿಗಳು ಒಟ್ಟು 9 ಕೋಟಿ, 75 ಲಕ್ಷ, 37 ಸಾವಿರ ರೂ.ಗಳಷ್ಟು ದುಡಿಯುವ ಬಂಡವಾಳವನ್ನು ಹೆಚ್ಚಿಸಲಾಗಿದೆ. ಇದಕ್ಕೆಲ್ಲ ಗ್ರಾಹಕರು ನೀಡಿದ ಸಹಕಾರವೇ ಕಾರಣ ಎಂದರು.

# ನಿಧನ ವಾರ್ತೆ

**ಲಲಿತಾಬಾಯಿ ಗ್ರಾಮಪುರೋಹಿತ**



ನರೇಗಲ್ಲ: ಪಟ್ಟಣದ ದತಾತ್ರೇಯ ದೇವಸ್ಥಾನದ ಬಳಿಯ ನಿವಾಸಿ ಲಲಿತಾಬಾಯಿ ನಾರಾಯಣಭಟ್ ಗ್ರಾಮಪುರೋಹಿತ (76) ಬುಧವಾರ ನಿಧನರಾದರು. ಮೃತರು ಸಹೋದರರು, ಸಹೋದರಿಯರು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

### ಮಹಿಳೆಯರಿಗೆ ವರದಾನವಾದ ಸಂಜೀವಿನಿ ಹಾಲು ಉತ್ಪಾದಕರ ಸಹಕಾರಿ ಸಂಘಗಳು

# ಕೃಷಿಗೂ ಸೈ, ಹೈನುಗಾರಿಕೆಗೂ ಜೈ!

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಲೂಕಿನಲ್ಲಿ ಸಂಜೀವಿನಿ ಯೋಜನೆ (ಎನ್‌ಆರ್‌ಎಲ್‌ಎಂ) ಮೂಲಕ ಗ್ರಾಮೀಣ ಪ್ರದೇಶಗಳಲ್ಲಿ ಬಡತನ ರೇಖೆಗಿಂತ ಕೆಳಮಟ್ಟದಲ್ಲಿ ಇರುವ ಮಹಿಳಾ ಗುಂಪುಗಳ ರಚನೆ ಮಾಡುವ ಮೂಲಕ ಆರ್ಥಿಕವಾಗಿ, ಸಾಮಾಜಿಕವಾಗಿ ಉನ್ನತಿ ಹೊಂದಲು ಸಹಾಯಕಾರಿಯಾಗಿದೆ. ಈ ಹಿನ್ನೆಲೆಯಲ್ಲಿ ಮಹಿಳೆ ಸ್ವಾವಲಂಬಿಯಾಗಲು ಮತ್ತು ಅವಳ ಆಂತರಿಕ ಶಕ್ತಿಯ ಪ್ರಜ್ಞೆಯನ್ನು ಅಭಿವೃದ್ಧಿಪಡಿಸುವ ಸಾಮರ್ಥ್ಯವನ್ನು ನಿರ್ಮಿಸುವ ಪ್ರಕ್ರಿಯೆಯಾಗಿದೆ.

ಭಾರತದಲ್ಲಿ ಹೈನುಗಾರಿಕೆಯು ಮಹಿಳಾ ಪ್ರಾಬಲ್ಯದ ಉದ್ಯಮವಾಗಿದೆ. ಮಹಿಳೆಯರು ತಮ್ಮ ದೈನಂದಿನ ಮನೆಕೆಲಸಗಳ ಜೊತೆಗೆ ಹೈನುಗಾರಿಕೆ ಮತ್ತು ಪಶುಸಂಗೋಪನೆ ಚಟುವಟಿಕೆಗಳಲ್ಲಿಯೂ ಭಾಗವಹಿಸುತ್ತಾರೆ. ಈ ಹಿನ್ನೆಲೆಯಲ್ಲಿ ತಾ.ಪಂ ಸಂಜೀವಿನಿ ಎನ್‌ಆರ್‌ಎಲ್‌ಎಂ ಯೋಜನೆ ಮತ್ತು ಕೆ.ಎಂ.ಎಫ್ ಇವರುಗಳ ಸಹಯೋಗದಲ್ಲಿ ತಾಲೂಕಿನ ಸುಗ್ನಳ್ಳಿ, ಸಾಸಲವಾಡ, ಕೊಂಚಿಗೇರಿ, ದೇವಿಹಾಳ ಮತ್ತು ಕಡಕೋಳ ಗ್ರಾಮಗಳಲ್ಲಿ ಸ್ವ-ಸಹಾಯ ಸಂಘಗಳ ನೇತೃತ್ವದಲ್ಲಿ ಮಹಿಳಾ ಹಾಲು ಉತ್ಪಾದಕರ ಸಂಘಗಳು ಕಳೆದ 5 ವರ್ಷಗಳಿಂದ ಸ್ಥಾಪಿತವಾಗಿದೆ.

ಈ ಮಹಿಳಾ ಡೈರಿ ಉತ್ಪಾದನಾ ಚಟುವಟಿಕೆಗಳಲ್ಲಿ ಪುರುಷರಿಗಿಂತ ಮಹಿಳೆಯರು ಹೆಚ್ಚು ಸಮಯವನ್ನು ಕಳೆಯುತ್ತಾರೆ. ತರಬೇತಿಯು ಸಬಲೀಕರಣದ ಪ್ರಮುಖ ಅಂಶಗಳಲ್ಲಿ ಒಂದಾಗಿದೆ. ಇದು ಜ್ಞಾನವನ್ನು ಹೆಚ್ಚಿಸುತ್ತದೆ, ಕೌಶಲ್ಯವನ್ನು ಸುಧಾರಿಸುತ್ತದೆ ಮತ್ತು ಗ್ರಾಮೀಣ ಮಹಿಳೆಯರ ಮನೋಭಾವವನ್ನು ಬದಲಾಯಿಸುತ್ತದೆ. ತಳಿಯ ಆಯ್ಕೆ, ಸ್ಥಳೀಯವಾಗಿ ಲಭ್ಯವಿರುವ ಪದಾರ್ಥಗಳನ್ನು ಬಳಸಿಕೊಂಡು ಸಮತೋಲಿತ ಆಹಾರವನ್ನು ಸಂಯೋಜಿಸುವುದು, ಗರ್ಭಾವಸ್ಥೆಯಲ್ಲಿ ಆಹಾರ ನೀಡುವುದು, ಆರೋಗ್ಯ ರಕ್ಷಣೆ, ಬ್ಯಾಂಕಿಂಗ್ ಮತ್ತು ವಿಮೆ ಹೈನುಗಾರಿಕೆಯಲ್ಲಿ ತರಬೇತಿಯ ಅತ್ಯಂತ ಆದ್ಯತೆಯ ಕ್ಷೇತ್ರಗಳಾಗಿವೆ. ನೂರಾರು ಮಹಿಳೆಯರಿಗೆ ಡೈರಿ ಫಾರ್ಮ್ ಕುರಿತು ತರಬೇತಿಗಳನ್ನು ನೀಡಲಾಗಿದೆ.



> ಸಂಜೀವಿನಿ ಯೋಜನೆಯಡಿ ನಮ್ಮ ಗ್ರಾಮದಲ್ಲಿ ಮಹಿಳಾ ಹಾಲು ಉತ್ಪಾದಕರ ಸಂಘ ಆರಂಭಿಸುವ ಮೂಲಕ ಮಹಿಳೆಯರಿಗೆ ಸಾಲ ಸೌಲಭ್ಯಗಳು, ಸಲಹೆ, ಮಾರ್ಗದರ್ಶನ ಮತ್ತು ತರಬೇತಿ ನೀಡಿದ್ದಾರೆ. ಇದರಿಂದ ಮಹಿಳೆಯರು ಆರ್ಥಿಕವಾಗಿ ಮುಂದೆ ಬರಲು ಅನುಕೂಲವಾಗಿದೆ.
>
> **– ಲಕ್ಷ್ಮವ್ವ ಕಲ್ಲಳ್ಳಿ.**
> **ಸ್ವ-ಸಹಾಯ ಸಂಘದ ಸದಸ್ಯರು,**
> **ದೇವಿಹಾಳ.**

ಸಾಲ ಸೌಲಭ್ಯಗಳು: ಸಾವಿರಾರು ಮಹಿಳಾ ಹಾಲು ಉತ್ಪಾದಕ ಸದಸ್ಯರಿಗೆ ಹೈನುಗಾರಿಕೆ ಉತ್ತೇಜನ ನೀಡಲು ಸಂಜೀವಿನಿ ಮಹಿಳಾ ಒಕ್ಕೂಟ ಮತ್ತು ಬ್ಯಾಂಕ್ ಮೂಲಕ ಸಾಲವನ್ನು ಕಡಿಮೆ ಬಡ್ಡಿ ದರಗಳಲ್ಲಿ ಒದಗಿಸಲಾಗಿದೆ.

ಪ್ರಗತಿ ಆದ್ಯತೆ: ಮಹಿಳಾ ಹಾಲು ಉತ್ಪಾದಕ ಸಹಕಾರಿ ಸಂಘಗಳಲ್ಲಿ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರು ಮಹಿಳೆಯರೇ ಇರುವುದರಿಂದ ಸಂಪೂರ್ಣವಾಗಿ ಆಡಳಿತ ಮತ್ತು ಡೈರಿಯನ್ನು ನಿರ್ವಹಣೆ ಮಹಿಳೆಯರು ಮಾಡುತ್ತಾರೆ.

ಹಾಲಿನ ಉತ್ಪಾದನೆ: ತಾಲೂಕಿನಲ್ಲಿ ಮಹಿಳಾ ಹಾಲು ಉತ್ಪಾದಕ ಸಹಕಾರಿ ಸಂಘಗಳ ಮೂಲಕ ಪ್ರತಿ ದಿನ ಸುಮಾರು 1 ಸಾವಿರದಿಂದ 1200 ಲೀ. ಹಾಲು ಉತ್ಪಾದನೆ ಮೂಲಕ ಮಾಸಿಕ ಲಕ್ಷಾಂತರ ರೂಪಾಯಿಗಳವರೆ ವಹಿವಾಟು ನಡೆಯುತ್ತಿದೆ.

ಹೊಸ ಡೈರಿ ಸಮೀಕ್ಷೆ: ಈಗಾಗಲೇ ತಾಲೂಕಿನ ಹೊಸ ಡೈರಿ ಪ್ರಾರಂಭ ಮಾಡುವ ಉದ್ದೇಶದಿಂದ ಕೆಎಂ ಎಫ್ ಮತ್ತು ಪಶುಪಾಲನೆ ಇಲಾಖೆಯ ಸಹಯೋಗದಲ್ಲಿ ಕನಕವಾಡ, ಜಲ್ಲಿಗೇರಿ, ಭಾವನೂರ, ಕಲ್ಲಾಗನೂರ, ಕಕ್ಕೂರಗುಂದಿ, ಪರಸಾಪೂರ ಸೇರಿದಂತೆ ಇತರ ಗ್ರಾಮಗಳಲ್ಲಿ ಪಶು ಸಖಿಯವರ ಮೂಲಕ ಸಮೀಕ್ಷೆಯನ್ನು ಕೈಗೊಳ್ಳಲಾಗಿದೆ.

ಒಟ್ಟಾರೆ ತಾಲೂಕಿನಲ್ಲಿ ಸಾವಿರಾರು ರೈತ ಮಹಿಳೆಯರು ಕೃಷಿ ಜೊತೆಗೆ ಹೈನುಗಾರಿಕೆಯ ಚಟುವಟಿಕೆಗಳನ್ನು ಮಾಡುವ ಮೂಲಕ ಆರ್ಥಿಕವಾಗಿ ಮುಂದೆ ಬರಲು ಸಾಧ್ಯವಾಗಿದೆ. ಹಾಲು ಉತ್ಪಾದಕ ಕೇಂದ್ರಗಳನ್ನು ಸ್ಥಾಪಿಸಿ ಸಲಹೆ, ಮಾರ್ಗದರ್ಶನ, ಸಾಲ ಸೌಲಭ್ಯಗಳನ್ನು ಒದಗಿಸಿದ ಸಂಜೀವಿನಿ ಯೋಜನೆ ಮತ್ತು ಕೆಎಂಎಫ್ ಸಿಬ್ಬಂದಿಗಳಿಗೆ ತಾಲೂಕಿನ ಎಲ್ಲಾ ಮಹಿಳಾ ಹಾಲು ಉತ್ಪಾದಕರ ಪರವಾಗಿ ಸದಸ್ಯರು ಕೃತಜ್ಞತೆ ತಿಳಿಸಿದ್ದಾರೆ.

## ಸುಧಾ ಪಾಟೀಲರಿಗೆ ಚಿನ್ನದ ಪದಕ

**■ವಿಜಯಸಾಕ್ಷಿ ಸುದ್ದಿ, ಗದಗ**



ಇಲ್ಲಿನ ಸಿದ್ದಲಿಂಗ ನಗರದ ಬಸವ ಯೋಗ ಕೇಂದ್ರದ ವಿದ್ಯಾರ್ಥಿನಿ ಹಾಗೂ ಪಾಪನಾಶಿಯ ಆಯುಷ್ಮಾನ್ ಆರೋಗ್ಯ ಮಂದಿರದ ಯೋಗ ಶಿಕ್ಷಕಿ ಸುಧಾ ಪಾಟೀಲ ಪಿ.ಜಿ. ಡಿಪ್ಲೋಮಾ ಇನ್ ಯೋಗಾ ಸ್ಟಡೀಸ್‌ನಲ್ಲಿ ಚಿನ್ನದ ಪದಕ ಪಡೆದಿದ್ದಾರೆ. ಸೆ.24ರಂದು ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ 74ನೇ ಘಟಿಕೋತ್ಸವದಲ್ಲಿ ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋಟ್ ಅವರು ಪದಕ ಪ್ರದಾನ ಮಾಡಿದರು. ಪದಕ ವಿಜೇತ ಸುಧಾ ಪಾಟೀಲರಿಗೆ ಯೋಗ ಕೇಂದ್ರದ ಚೇರಮನ್ ಎಸ್.ವಿ. ಸಂಕನೂರ, ಪ್ರಾಚಾರ್ಯ ಕೆ.ಎಸ್. ಪಲ್ಲೇದ, ಕಾರ್ಯದರ್ಶಿ ಚೇತನ್ ಚುಂಚಾ, ಎಸ್.ಎಸ್. ಪಟ್ಟಣಶೆಟ್ಟಿ, ಜಿಲ್ಲಾ ಆಯುಷ್ ಅಧಿಕಾರಿ ಡಾ. ಎಂ.ಎಸ್. ಉಪ್ಪಿನ, ಡಾ. ಅಶೋಕ ಮತ್ತಿಗಟ್ಟಿ ಮುಂತಾದವರು ಅಭಿನಂದಿಸಿದ್ದಾರೆ.

## ತಂಬಾಕು ಮುಕ್ತ ಯುವ ಅಭಿಯಾನಕ್ಕೆ ಚಾಲನೆ

▶▶ಮೊದಲನೇ ಪುಟದಿಂದ

ಜಿಲ್ಲಾ ತಂಬಾಕು ವ್ಯಸನ ಮುಕ್ತ ಕೇಂದ್ರದ ಮೂಲಕ ಈ ವರ್ಷ ಒಟ್ಟು 1749 ಜನರಿಗೆ ಆಪ್ತ ಸಮಾಲೋಚನೆ ಮಾಡಲಾಗಿದೆ. ಸಮುದಾಯ ಮಟ್ಟದಲ್ಲಿ ಕೇಂದ್ರೀಕೃತ ಗುಂಪು ಚರ್ಚೆಯ ಮೂಲಕ ಒಟ್ಟು 25 ಎಫ್.ಜಿ.ಡಿ. ಕಾರ್ಯಕ್ರಮ ಜಿಲ್ಲೆಯ ನಗರ ಸ್ಥಳಿಯ ಸಂಸ್ಥೆಗಳ ಪೌರಕಾರ್ಮಿಕರಿಗೆ ತಂಬಾಕು ಬಳಕೆಯಿಂದಾಗುವ ದುಷ್ಪರಿಣಾಮ ಹಾಗೂ ಬಾಯಿ ಕ್ಯಾನ್ಸರ್ ತಪಾಸಣೆ ಮಾಡಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿ.ಪಂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್. ಎಸ್. ನೀಲಗುಂದ, ಜಿಲ್ಲಾ ಆರ್.ಸಿ.ಎಚ್.ಅಧಿಕಾರಿ ಡಾ. ಮೀನಾಕ್ಷಿ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಿ.ಸಿ. ಕರಿಗೌಡ್ರ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರರಾದ ಗೋಪಾಲ ಸುರಪುರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜಿ.ಎಲ್. ಬಾರಾಟಕ್ಕೆ, ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲೂಕು ಆರೋಗ್ಯಾಧಿಕಾರಿಗಳು, ಸಮಿತಿಯ ಸದಸ್ಯರು ಹಾಜರಿದ್ದರು.

## ಬೀದಿ ನಾಯಿಗಳ ನಿಯಂತ್ರಣಕ್ಕೆ ಕ್ರಮವಹಿಸಿ

▶▶ಮೊದಲನೇ ಪುಟದಿಂದ

ಜಿಲ್ಲೆಯಲ್ಲಿ ಡೆಂಗ್ಯೂ ಜ್ವರ ಬಾರದಂತೆ ಮುನ್ನೆಚ್ಚರಿಕೆ ವಹಿಸಿ ಅದರ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಬೇಕು. ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕು. ನೀರು ಸಂಗ್ರಹಣಾ ಪರಿಕರಗಳನ್ನು ಮೇಲಿಂದ ಮೇಲೆ ಸ್ವಚ್ಛಗೊಳಿಸಬೇಕು. ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಚರಂಡಿ ನಾಲೆಗಳಲ್ಲಿ ಕಸಕಡ್ಡಿಗಳನ್ನು ಎಸೆಯದೇ ನೀರಿನ ಹರಿಯುವಿಕೆಗೆ ತಡೆಯಾಗದಂತೆ ನೋಡಿಕೊಳ್ಳಬೇಕು. ಸ್ವಚ್ಛತೆಯ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ರಾಷ್ಟ್ರೀಯ ರೇಬಿಸ್ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಜಿಲ್ಲೆಯಲ್ಲಿ ರಾಷ್ಟ್ರೀಯ ರೇಬಿಸ್ ನಿಯಂತ್ರಣ ಕಾರ್ಯಕ್ರಮವು ಅತ್ಯಂತ ಯಶಸ್ವಿಯಾಗಿ ಅನುಷ್ಠಾನಗೊಂಡಿದೆ. ಜನವರಿ 2024ರಿಂದ ಆಗಸ್ಟ 2024ರವರೆಗೆ ಒಟ್ಟು 8144 ನಾಯಿ ಕಡಿತದ ಪ್ರಕರಣಗಳು ವರದಿಯಾಗಿವೆ. ಜಿಲ್ಲೆಯ ಎಲ್ಲ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ, ತಾಲೂಕು ಮತ್ತು ಜಿಲ್ಲಾ ಆಸ್ಪತ್ರೆಯಲ್ಲಿ ಲಸಿಕೆಗಳು ಲಭ್ಯವಿದ್ದು, ಎಲ್ಲ ಪ್ರಕರಣಗಳಿಗೂ ಲಸಿಕೆಯನ್ನು ಉಚಿತವಾಗಿ ನೀಡಲಾಗುತ್ತಿದೆ. ಜನವರಿ 2024ರಿಂದ ಆಗಸ್ಟ 2024ರವರೆಗೆ 124 ಹಾವು ಕಡಿತ ಪ್ರಕರಣಗಳು ವರದಿಯಾಗಿದ್ದು, ಯಾವುದೇ ಮರಣ ಸಂಭವಿಸಿಲ್ಲ. ಜಿಲ್ಲೆಯಲ್ಲಿರುವ ಎಲ್ಲ ಆರೋಗ್ಯ ಸಂಸ್ಥೆಗಳ ವೈದ್ಯಾಧಿಕಾರಿಗಳಿಗೆ ಈ ಕುರಿತು ತರಬೇತಿಯನ್ನು ನೀಡಲಾಗಿದೆ ಎಂದು ಸಭೆಯಲ್ಲಿ ವಿವರಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ.ಮೀನಾಕ್ಷಿ, ಜಿಲ್ಲಾ ಶಸ್ತ್ರಚಿಕಿತ್ಸಕ ಬಿ.ಸಿ. ಕರಿಗೌಡ್ರ, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ. ವೈ.ಕೆ. ಭಜಂತ್ರಿ ಸೇರಿದಂತೆ ತಾಲೂಕಾ ಆರೋಗ್ಯಾಧಿಕಾರಿಗಳು, ಆರೋಗ್ಯ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು, ಸಮಿತಿಯ ಸದಸ್ಯರು ಹಾಜರಿದ್ದರು.

### ವಿಶ್ವ ಔಷಧ ತಜ್ಞರ ದಿನಾಚರಣೆ ಕಾರ್ಯಕ್ರಮದಲ್ಲಿ ಮಣಕವಾಡದ ಶ್ರೀಗಳು

# ಔಷಧ ತಜ್ಞರ ಸೇವೆ ಅನುಪಮ

**■ವಿಜಯಸಾಕ್ಷಿ ಸುದ್ದಿ, ಗದಗ**

ಜನರ ನೋವು ನಿವಾರಿಸುವವರ ಕಣ್ಣೀರು ಒರೆಸಿ ಆತ್ಮಸ್ಥೈರ್ಯ ತುಂಬುವ ಕಾಯದಲ್ಲಿ ತಮ್ಮನ್ನು ಸಮರ್ಪಿಸಿಕೊಂಡಿರುವ ಔಷಧ ತಜ್ಞರ ಸೇವೆ ಅನುಪಮವಾದದ್ದು ಎಂದು ಮಣಕವಾಡದ ಪೂಜ್ಯ ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳು ಹೇಳಿದರು.

ಅವರು ಬುಧವಾರ ಗದುಗಿನ ವಿವೇಕಾನಂದ ನಗರದ ಕಾಶೀ ವಿಶ್ವನಾಥ ದೇವಸ್ಥಾನದ ಸಭಾಂಗಣದಲ್ಲಿ ಗದಗ ಜಿಲ್ಲಾ ಔಷಧ ವ್ಯಾಪಾರಸ್ಥರ ಸಂಘ ಏರ್ಪಡಿಸಿದ್ದ ವಿಶ್ವ ಔಷಧ ತಜ್ಞರ ದಿನಾಚರಣೆ, ಹಿರಿಯ ಔಷಧ ತಜ್ಞರಿಗೆ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ, ಸಾನ್ನಿಧ್ಯ ವಹಿಸಿ ಮಾತನಾಡಿದರು.

ಆರೋಗ್ಯದಲ್ಲಿ ತೊಂದರೆಯಾಗಿ ನೋವಿನಿಂದ ಬಳಲುವವರಿಗೆ ಔಷಧ ಕೊಟ್ಟು ಹಗಲಿರುಳು ಸೇವೆ ಮಾಡುತ್ತಿರುವ ಔಷಧ ವ್ಯಾಪಾರಸ್ಥರ ಸೇವೆ ಅನುಪಮವಾದದ್ದು. ಬದಲಾದ ಜೀವನ ಶೈಲಿ, ಬದಲಾದ ಸನ್ನಿವೇಶದಿಂದಾಗಿ ಮನುಷ್ಯ ಸಹಜವಾಗಿ ಹಲವಾರು ರೋಗಳಿಗೆ ಬಲಿಯಾಗುತ್ತಿದ್ದಾನೆ. ಈ ಹಿಂದೆ ಮನೆಯಲ್ಲಿ ಮಸಾಲೆ ತುಂಬಿದ ಡಬ್ಬಿಗಳಿರುತ್ತಿದ್ದವು. ಆ ಜಾಗೆಯಲ್ಲಿ ಈಗ ಮಾತ್ರೆ ಡಬ್ಬಿಗಳು ಬಂದಿವೆ. ಮಾತೃ ಭಕ್ತಿ ಕಡಿಮೆಯಾಗಿ ಮಾತ್ರೆ ಭಕ್ತಿ ಹೆಚ್ಚುತ್ತಿದೆ ಎಂದರು.

ತುರ್ತು ಸಂದರ್ಭದಲ್ಲಿ ಔಷಧ ತಜ್ಞರು ಕೊಟ್ಟ ಔಷಧಗಳಿಂದ ಆರಾಮ ಆಗಿರುವ ಸಂದರ್ಭಗಳಿವೆ. ಜೀವನ್ಮರಣಗಳ ಮಧ್ಯ ತೊಳಲಾಡುತ್ತಿರುವವರ ಜೀವ ರಕ್ಷಣೆಗೆ ಸಣ್ಣ ಪ್ರಯತ್ನದ ಕಾರ್ಯವನ್ನು ದೇವರು ನಿಮಗೆ ಕೊಟ್ಟಿದ್ದಾನೆ. ನಿಷ್ಠೆ-ಪ್ರಾಮಾಣಿಕತೆಯಿಂದ ಜೊತೆಗೆ ಮಾನವೀಯತೆಯಿಂದ ಮಾಡಿ ಸಂತೃಪ್ತಿಪಟ್ಟುಕೊಳ್ಳಿ ಎಂದರು.

ದೇಹದಾನ, ನೇತ್ರದಾನ ಮಾಡುವ ಮೂಲಕ ಇನ್ನೊಬ್ಬರ ಬದುಕಿಗೆ ಚೈತನ್ಯ ತುಂಬಿ. ದೇವರಿಗೆ ಬೆಳ್ಳಿಯ ಕಣ್ಣುಬೊಟ್ಟು ಕೊಡುವ ಬದಲು ಮರಣದ ನಂತರ ದೇಹದಾನ, ನೇತ್ರದಾನದ ಸಂಕಲ್ಪ ಮಾಡಿ. ಸತ್ತಾಗ ಹೆಗಲು ಕೊಡುವದು ಮುಖ್ಯವಲ್ಲ, ಬಿದ್ದಾಗ ಬೆನ್ನು ಚಪ್ಪರಿಸಿ ಆತ್ಮವಿಶ್ವಾಸ ತುಂಬುವದು ಮುಖ್ಯ. ನೀವು ಎಕ್ಸಪೈರ್ ಆಗುವ ಮುನ್ನ ನಿಮ್ಮ ಬದುಕು ಇನ್ನೊಬ್ಬರಿಗೆ ಇನ್‌ಸ್ಪೈರ್ ಆಗಲಿ ಎಂದರು.

ಮುಖ್ಯ ಅತಿಥಿ ಕೋಟುಮಚಗಿಯ ಸೋಮೇಶ್ವರ ಶಿಕ್ಷಣ ಸಮಿತಿಯ ಅಧ್ಯಕ್ಷ ಆರ್.ವ್ಹಿ. ಕುಲಕರ್ಣಿ ಹಾಗೂ ಮಂಜುನಾಥ ರಡ್ಡಿ ಸಂದರ್ಭೋಚಿತವಾಗಿ ಮತನಾಡಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಘದ ಗದಗ ತಾಲೂಕಾಧ್ಯಕ್ಷರಾದ ರಾಮನಗೌಡ ದಾನಪ್ಪಗೌಡ್ರ, ಔಷಧ ವ್ಯಾಪಾರಸ್ಥರು ಹಗಲಿರುಳು ಜನರ ಸೇವೆಯಲ್ಲಿ ತೊಡಗಿದವರು. ರೋಗಿಯ ಹಿತ ಆರೋಗ್ಯವನ್ನು ಬಯಸಿ ಮಾನವೀಯತೆಯಿಂದ ಕೆಲಸ ಮಾಡುವವರಾಗಿದ್ದಾರೆ ಎಂದರಲ್ಲದೆ ಔಷಧ ವಿತರಕರ ಭವನ ನಿರ್ಮಿಸುವ ಯೋಜನೆ ಸಂಘಕ್ಕೆ ಇದ್ದು, ಈ ಕಾರ್ಯಕ್ಕೆ ಎಲ್ಲರೂ ಕೈಜೋಡಿಸಬೇಕೆಂದರು.

ಗದಗ ವೃತ್ತದ ಸಹಾಯಕ ಔಷಧ ನಿಯಂತ್ರಕ ನೀಲಕಂಠ ರಾಠೋಡ, ರಾಜ್ಯ ಜಿಲ್ಲಾ ಪ್ರತಿನಿಧಿ ಎಂ.ಬಿ. ರಮಣಿ ಸೇರಿದಂತೆ ಹಿರಿಯ ಔಷಧ ತಜ್ಞರಾದ ಶಾಮಸುಂದರ ಆನೆಗುಂದಿ, ಮಹಾಬಳೇಶ್ವರಪ್ಪ ಕೋಡಬಳಿ, ಚಂದ್ರಕಾಂತ ಗದಗ, ಗಂಗಾಧರ ಮೆಕ್ಕಿ, ಜನದತ್ತ ಹಿರೇಗೌಡ್ರ, ಮಹೇಶ್ವರ ಮಾಳಗಿ, ಮಹಾದೇವಗೌಡ ಲಿಂಗನಗೌಡ್ರ, ನಾಗರಾಜ ಲಿಂಗಸೂರ ಹಾಗೂ ರಾಜೇಂದ್ರ ನಡವಿ ಅಲ್ಲದೆ ಗದಗ ಜಿಲ್ಲೆಯ ಎಲ್ಲ ತಾಲೂಕಿನ ಅಧ್ಯಕ್ಷರನ್ನು ಸನ್ಮಾನಿಸಿ ಗೌರವಿಸಲಾಯಿತು.

ಗುರುರಾಜ ಕುಲಕರ್ಣಿ ಪ್ರಾರ್ಥಿಸಿದರು, ಮಹೇಶ ಕುಂದ್ರಾಳಹಿರೇಮಠ ಅವರಿಂದ ಭಕ್ತಿಗೀತೆ ಜರುಗಿತು. ನಾಗೇಶ ಹುಬ್ಬಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ರಮಜಾನ್‌ಸಾಬ ನದಾಫ ನಿರೂಪಿಸಿದರು. ಜ್ಞಾನೇಶ ಖೋಕಲೆ ವಂದಿಸಿದರು. ಗದಗ ಜಿಲ್ಲೆಯ ಎಲ್ಲ ತಾಲೂಕಾ ಸಂಘಟನೆಗಳ ಪದಾಧಿಕಾರಿಗಳು ಸೇರಿದಂತೆ ಔಷಧ ವ್ಯಾಪಾರಸ್ಥರು ಕಾರ್ಯಕ್ರಮದಲ್ಲಿದ್ದರು.





> ಅತಿಥಿಯಾಗಿ ಆಗಮಿಸಿದ್ದ ಗದಗ ವೃತ್ತದ ಸಹಾಯಕ ಔಷಧ ನಿಯಂತ್ರಕ ನೀಲಕಂಠ ರಾಠೋಡ ಮಾತನಾಡಿ, ಗುಣಮಟ್ಟದ ಹಾಗೂ ಕಡಿಮೆ ದರದಲ್ಲಿ ಔಷಧ ಉತ್ಪಾದನೆಗೆ ಭಾರತ ಹೆಸರಾಗಿದೆ. ಔಷಧ ವ್ಯಾಪಾರಸ್ಥರ ಕಾರ್ಯ ಸೇವಾಮನೋಭಾವನೆಯಿಂದ ಕೂಡಿದ್ದಾಗಿದೆ. ಹಗಲು ರಾತ್ರಿ ತುರ್ತು ಸಂದರ್ಭದಲ್ಲಿ ಔಷಧ ಪೂರೈಸುವ ಮೂಲಕ ಮಾನವೀಯತೆ ಕಾರ್ಯ ಮಾಡುತ್ತಿದ್ದಾರೆ ಎಂದರು.

# ಗಿರಣಿಗಳ ಪರಿಸ್ಥಿತಿ ಹದಗೆಟ್ಟಿದೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಶ್ರೀ ಸೋಮೇಶ್ವರ ರೈತರ ಸಹಕಾರಿ ನೂಲಿನ ಗಿರಣಿಯ 44ನೇ ವಾರ್ಷಿಕ ಸಾಮಾನ್ಯ ಸಭೆ ಗಿರಣಿಯ ಆವರಣದಲ್ಲಿ ಜರುಗಿತು. ಗಿರಣಿಯ ಸರ್ಕಾರಿ ಪ್ರತಿನಿಧಿಯಾಗಿ ನೇಮಕಗೊಂಡಿರುವ ವೀರಯ್ಯ ಮಠಪತಿ ಮಾತನಾಡಿ, 1991-92ರಲ್ಲಿ ಉತ್ಪಾದನೆ ಗಿರಣಿ ಉತ್ಪಾದನೆ ಆರಂಭಿಸಿ ನೂರಾರು ಕುಟುಂಬಗಳಿಗೆ ಉದ್ಯೋಗ ನೀಡಿತ್ತು. ಆದರೆ ಹತ್ತು ಹಲವು ಕಾರಣಗಳಿಂದಾಗಿ ಸಧ್ಯ ಬಂದ್ ಆಗಿದೆ. ಮತ್ತೆ ಉತ್ಪಾದನೆ ಆರಂಭ ಆಗಬೇಕಾದರೆ ಸರ್ಕಾರದ ನೆರವು ಅಗತ್ಯ ಎಂದರು.



ಗಿರಣಿಯ ಮಾಜಿ ಎಂಡಿ ಜೆ.ಕೊಟ್ರೇಶ ಮಾತನಾಡಿ, ಗಿರಣಿಯನ್ನು ಲೀಜ್ ಕೊಡಲು ಸಿದ್ಧವಿದ್ದರೂ ಯಾರೂ ಮುಂದೆ ಬರುತ್ತಿಲ್ಲ. ನೂಲಿಗೆ ಬೇಡಿಕೆ ಕುಸಿದಿದೆ. ಜವಳಿ ಉದ್ಯಮವೂ ನೆಲಕಚ್ಚಿದೆ. ಇಂಥ ಪರಿಸ್ಥಿತಿಯಲ್ಲಿ ರಾಜ್ಯದಲ್ಲಿ ನೂಲಿನ ಗಿರಣಿಗಳ ಪರಿಸ್ಥಿತಿ ಹದಗೆಟ್ಟಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಗಿರಣಿಯ ಅಧ್ಯಕ್ಷ ಪುಲಿಕೇಶ ಉಪನಾಳ ಮಾತನಾಡಿದರು. ಸದಸ್ಯರಾದ ಶ್ರೀಕಂಠಗೌಡ ಹಿರೇಗೌಡ್ರ, ನಿವೃತ್ತ ಶಿಕ್ಷಕ ಎ.ಎಚ್. ಅಂಚಿ, ನಾಗಪ್ಪ ಮೂಕಿ ಮಾತನಾಡಿ, ಸ್ಥಗಿತಗೊಂಡಿರುವ ಗಿರಣಿಯನ್ನು ಪುನಃ ಆರಂಭಿಸಲು ಕ್ರಮಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಗಿರಣಿ ಆಡಳಿತ ಮಂಡಳಿಯ ಉಪಾಧ್ಯಕ್ಷ ಜಿ.ಬಿ. ಮೆಣಸಿನಕಾಯಿ, ನಿರ್ದೇಶಕರಾದ ನೀಲಪ್ಪ ಹತ್ತಿ, ಶಿರೂರಪ್ಪ ಬಿಸನಳ್ಳಿ, ಎನ್. ಎನ್. ರಗಟಿ, ಎಂ.ಕೆ. ಕಳ್ಳಿಮಠ, ನಾಗನೂರ, ಸಿ.ಕೆ. ಗುಂಜಳ, ಶಂಕ್ರಪ್ಪ ಗೊರವರ, ಎನ್.ಸಿ. ಧರ್ಮಾಯತ, ಬಿ.ಪಿ. ಸಾಸಲವಾಡ, ಜವಳಿ ಮತ್ತು ಕೈಮಗ್ಗ ಇಲಾಖೆಯ ಉಪನಿರ್ದೇಶಕರಾದ ಎಚ್.ಬಿ. ಪಾಟೀಲ, ಜಿ.ರೇವಣ್ಣ ಮತ್ತು ಸಲಹಾ ಸಮಿತಿ ಸದಸ್ಯರು ಇದ್ದರು. ಮಂಜುನಾಥ ಕುಂಬಾರ ನಿರೂಪಿಸಿದರು. ನಿರ್ಮಲಾ ಅರಳಿ ವಂದಿಸಿದರು.

### 2024-25ನೇ ಸಾಲಿನ ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟ

# ವಿವಿಧ ಜಿಲ್ಲೆಗಳಲ್ಲಿ ಸ್ಪರ್ಧೆಗಳು

**■ವಿಜಯಸಾಕ್ಷಿ ಸುದ್ದಿ, ಗದಗ**

2024-25ನೇ ಸಾಲಿನ ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟದ ಸ್ಪರ್ಧೆಗಳನ್ನು ಈ ಕೆಳಕಂಡ ಜಿಲ್ಲೆಗಳಲ್ಲಿ ಸಂಘಟಿಸಲಾಗಿದ್ದು, ಗದಗ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ವೈಯಕ್ತಿಕ ಕ್ರೀಡೆಗಳಲ್ಲಿ ಭಾಗವಹಿಸಿ ವಿಜೇತರಾಗಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದವರು ಹಾಗೂ ಗುಂಪು ಕ್ರೀಡೆಗಳಲ್ಲಿ ಪ್ರಥಮ ಸ್ಥಾನ ಪಡೆದವರು ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾ ಕೂಟದಲ್ಲಿ ಭಾಗವಹಿಸಲು ಅರ್ಹತೆ ಹೊಂದಿದ್ದು, ಅವರುಗಳು ಈ ಕೆಳಕಂಡ ದಿನಾಂಕಗಳನ್ನು ಆಯಾ ಜಿಲ್ಲೆಗಳಲ್ಲಿ ಆಯಾ ಕ್ರೀಡೆಗೆ ಸಂಬಂಧಪಟ್ಟವರು ಕೆಳಗೆ ಕಾಣಿಸಿದ ಸ್ಥಳಗಳಲ್ಲಿ ಸಂಬಂಧಪಟ್ಟವರಲ್ಲಿ ವರದಿ ಮಾಡಿಕೊಳ್ಳುವಂತೆ ತಿಳಿಸಲಾಗಿದೆ.

ಗದಗ ಜಿಲ್ಲೆಯಲ್ಲಿ ನಡೆಯುವ ವಿಭಾಗ ಮಟ್ಟದ ದಸರಾ ಕ್ರೀಡಾಕೂಟಗಳ ವಿವರ: ಫುಟ್‌ಬಾಲ್ ಕ್ರೀಡೆಯು ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಸೆ.28ರಂದು ಬೆಳಿಗ್ಗೆ 9 ಗಂಟೆಗೆ ಜರುಗಲಿದೆ. ಸಂಚಾಲಕರು-ಎಮ್.ಡಿ. ತಳ್ಳಳ್ಳಿ-9449068741, ವಿನಾಯಕ ಯಂಕಂಚಿ-9019717032.

ಹಾಕಿ ಕ್ರೀಡೆಯು ಬೆಟಗೇರಿಯ ಮಹಾತ್ಮಾ ಗಾಂಧಿ ಹಾಕಿ ಕ್ರೀಡಾಂಗಣದಲ್ಲಿ ಸೆ.28 ರಂದು ಬೆ 9 ಗಂಟೆಗೆ ಜರುಗಲಿದ್ದು, ಸಂಚಾಲಕರು-ವಿ.ವಿ. ಈಟಿ-6362723720, ಮಂಜುನಾಥ ಮುಟಗಾರ- 9845898182.

ಕಬಡ್ಡಿ ಕ್ರೀಡೆ ನಗರದ ಕಳಸಾಪುರ ರಸ್ತೆಯಲ್ಲಿನ ಒಳಾಂಗಣ ಕ್ರಿಡಾಂಗಣದಲ್ಲಿ ಸೆ.28ರಂದು ಬೆ 9 ಗಂಟೆಗೆ ಜರುಗಲಿದ್ದು, ಸಂಚಾಲಕರು-ಚಂದ್ರಶೇಖರ ಮೇಲಿನಮನಿ-8618320040, ನಿಂಗಾರೆಡ್ಡಿ ತೇರಿನ ಗಡ್ಡಿ- 7975891388.

ಬಾಗಲಕೋಟೆ ಜಿಲ್ಲೆಯಲ್ಲಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟಗಳ ವಿವರ: ವುಶು, ನೆಟ್ ಬಾಲ್ ಯೋಗ ಕ್ರೀಡೆಯು ಬಾಗಲಕೋಟೆಯ ಜಿಲ್ಲಾ ಕ್ರೀಡಾಂಗಣ ಸೆ.29ರಂದು ಬೆ 9 ಗಂಟೆಗೆ ಜರುಗಲಿದ್ದು, ಸಂಚಾಲಕರು-ಅಶೋಕ ಮೊಕಾಶಿ-789278646, ಅನಿತಾ ನಿಂಬರಗಿ-9449959064, ಕಾಡೇಶ ನ್ಯಾಮಗೌಡ-8792507212.

ಹಾವೇರಿ ಜಿಲ್ಲೆಯಲ್ಲಿ ನಡೆಯುವ ವಿಭಾಗ ಮಟ್ಟದ ದಸರಾ ಕ್ರೀಡಾಕೂಟಗಳ ವಿವರ: ಹ್ಯಾಂಡ್‌ಬಾಲ್, ಬಾಲ್ ಬ್ಯಾಡ್ಮಿಂಟನ್ ಕ್ರೀಡೆಯು ಹಾವೇರಿಯ ಹೊಸಮನಿ ಸಿದ್ದಪ್ಪ ಜಿಲ್ಲಾ ಕ್ರಿಡಾಂಗಣದಲ್ಲಿ ಸೆ.29ರಂದು ಬೆ 9 ಗಂಟೆಗೆ ಜರುಗಲಿದ್ದು, ಕಚೇರಿಯ ದೂರವಾಣಿ ಸಂಖ್ಯೆ-08375-232443 ಸಂಪರ್ಕಿಸಬಹುದಾಗಿದೆ.

ಧಾರವಾಡ ಜಿಲ್ಲೆಯಲ್ಲಿ ನಡೆಯುವ ವಿಭಾಗ ಮಟ್ಟದ ದಸರಾ ಕ್ರೀಡಾಕೂಟಗಳ ವಿವರ: ಜಿಮ್ನಾಸ್ಟಿಕ್ ಕ್ರೀಡೆಯು ಧಾರವಾಡದ ಬಾಲಮಾರುತಿ ಜಿಮ್ನಾಸ್ಟಿಕ್ ಸಂಸ್ಥೆಯಲ್ಲಿ ಸೆ.27ರಂದು ಬೆ 9 ಗಂಟೆಗೆ ಜರುಗಲಿದ್ದು, ಸಂಚಾಲಕರು- ಮುರ್ತು ಗುಡ್ಡೆ-9448555818.

ಟೇಕ್ವಾಂಡೊ ಕ್ರೀಡೆಯು ಧಾರವಾಡದ ಜಿಲ್ಲಾ ಒಳಾಂಗಣ ಕ್ರಿಡಾಂಗಣದಲ್ಲಿ ಸೆ.27ರಂದು ಬೆ 9 ಗಂಟೆಗೆ ಜರುಗಲಿದ್ದು ಸಂಚಾಲಕರು-ಪರಪ್ಪ ಕ್ಷಾತ್ರ ತೇಜ-8147818658. ಅಥ್ಲೆಟಿಕ್ ಕ್ರೀಡೆಯು ಧಾರವಾಡ ಆರ್.ಎನ್. ಶೆಟ್ಟಿ ಜಿಲ್ಲಾ ಕ್ರಿಡಾಂಗಣದಲ್ಲಿ ಸೆ.28ರಂದು ಬೆ 9 ಗಂಟೆಗೆ ಜರುಗಲಿದ್ದು, ಸಂಚಾಲಕರು- ಶಾಮಲಾ ಪಾಟೀಲ -9845868491.

ಬ್ಯಾಡ್ಮಿಂಟನ್ ಮತ್ತು ಟೇಬಲ್ ಟೆನಿಸ್ ಕ್ರೀಡೆಯು ಧಾರವಾಡದ ಜಿಲ್ಲಾ ಒಳಾಂಗಣ ಕ್ರಿಡಾಂಗಣದಲ್ಲಿ ಸೆ.28ರಂದು ಬೆ 9 ಗಂಟೆಗೆ ಜರುಗಲಿದ್ದು, ಸಂಚಾಲಕರು-ಮನೋಹರ ಲಂಗೋಟಿ-7353399884, ವೀರೇಶ ಕಲ್ಮಠ-9886466576. ಟೆನ್ನಿಸ್ ಕ್ರೀಡೆಯು ಧಾರವಾಡದ ರಾಜ್ಯ ವಿಲಿಯನ್ ಲಾನ್ ಟೆನ್ನಿಸ್ ಮೈದಾನದಲ್ಲಿ ಸೆ.28ರಂದು ಬೆ 9 ಗಂಟಗೆ ಜರುಗಲಿದ್ದು, ಸಂಚಾಲಕರು-ಪಿ.ಕೆ. ಹಾಸನ- 8147818658.

ಬೆಳಗಾವಿ ಜಿಲ್ಲೆಯಲ್ಲಿ ನಡೆಯುವ ವಿಭಾಗ ಮಟ್ಟದ ದಸರಾ ಕ್ರಿಡಾಕೂಟಗಳ ವಿವರ: ವಾಲಿಬಾಲ್, ಬಾಸ್ಕೆಟ್ ಬಾಲ್(ಆಯ್ಕೆ) ಕ್ರೀಡೆಯು ಬೆಳಗಾವಿಯ ಜಿಲ್ಲಾ ಕ್ರೀಡಾಂಗಣದಲ್ಲಿ ಸೆ.28ರಂದು ಬೆ 9 ಗಂಟೆಗೆ ಜರುಗಲಿದ್ದು ಸಂಚಾಲಕರು-ಬಸವರಾಜ-7411144485. ಕುಸ್ತಿ, ಬಾಕ್ಸಿಂಗ್ (ಆಯ್ಕೆ) ಕ್ರಿಡೆಯು ಬೆಳಗಾವಿಯ ಒಳಾಂಗಣ ಕ್ರಿಡಾಂಗಣ ಕೊಲ್ಲಾಪೂರ ಸರ್ಕಲ್ ದಲ್ಲಿ ಸೆ 28 ರಂದು ಬೆ 9 ಗಂಟೆಗೆ ಜರುಗಲಿದ್ದು ಸಂಚಾಲಕರು-ನಾಗರಾಜ ಎ.ಆರ್.ಕೆ.-6362931710.

ಈಜು ಕ್ರೀಡೆಯು ಬೆಳಗಾವಿಯ ಮಹಾನಗರ ಪಾಲಿಕೆ ಈಜುಕೊಳ, ಗೋವಾವೇಜ್ ಬೆಳಗಾವಿಯಲ್ಲಿ ಸೆ.28ರಂದು ಬೆ 9 ಗಂಟೆಗೆ ಜರುಗಲಿದ್ದು, ಸಂಚಾಲಕರು-ನಾಮದೇವ ಮಿರಜಕರ-9379744731. ಭಾರ ಎತ್ತುವ ಕ್ರೀಡೆಯು ಬೆಳಗಾವಿ ಜಿಲ್ಲಾ ಕ್ರೀಡಾಂಗಣದಲ್ಲಿ ಸೆ.29ರಂದು ಬೆ 9 ಗಂಟೆಗೆ ಜರುಗಲಿದ್ದು, ಸಂಚಾಲಕರು-ಸದಾನಂದ ಮಹಾಶೆಟ್ಟಿ-7892137503.

ಜುಡೋ (ಆಯ್ಕೆ) ಬೆಳಗಾವಿಯ ಕೊಲ್ಲಾಪುರ ಸರ್ಕಲ್ ಒಳಾಂಗಣ ಕ್ರಿಡಾಂಗಣದಲ್ಲಿ ಸೆ 29ರಂದು ಬೆ 9 ಗಂಟೆಗೆ ಜರುಗಲಿದ್ದು, ಸಂಚಾಲಕರು- ರೋಹಿಣಿ ಪಾಟೀಲ-8618619003.

ಕಾರವಾರ ಜಿಲ್ಲೆಯಲ್ಲಿ ನಡೆಯುವ ವಿಭಾಗ ಮಟ್ಟದ ದಸರಾ ಕ್ರೀಡಾಕೂಟಗಳ ವಿವರ: ಖೋ ಖೋ ಮತ್ತು ಥ್ರೋಬಾಲ್ (ಆಯ್ಕೆ) ಕ್ರೀಡೆಯು ಶ್ರೀ ಮಾರಿಕಾಂಬಾ ಜಿಲ್ಲಾ ಕ್ರೀಡಾಂಗಣ ಶಿರಸಿಯಲ್ಲಿ ಸೆ 29ರಂದು ಬೆ 9 ಗಂಟೆಗೆ ಜರುಗಲಿದ್ದು, ಸಹಾಯಕ ನಿರ್ದೇಶಕರ ಮೊ.ಸಂ- 9480886551 ಸಂಪರ್ಕಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರಿಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರಿಡಾಂಗಣ, ದೂರವಾಣಿ-08372-238345 ಹಾಗೂ ಸುರೇಶ ವಿ. ಸಂಗಮದ ದೂರವಾಣಿ -9060703554 ಸಂಪರ್ಕಿಸಬಹುದಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka